ಬೆಂಗಳೂರು,
ಕೋಲಾರ,
ಹಾಸನ,
ಚಿತ್ರದುರ್ಗ,
ದಾವಣಗೆರೆ,
ವಿಜಯನಗರ,
ಬಳ್ಳಾರಿ,
ರಾಯಚೂರು,
ವಿಜಯಪುರ,
ಕಲಬುರ್ಗಿ

ದಶಕದ ನಡಿಗೆ...
RNI No: KARKAN/2014/54928
ನೊಂದವರ ಧ್ವನಿ

# ಸಹಾಯ ವಾಣಿ

www.sahayavani.com
SAHAYAVANI
Postal Registration N.o KA/BGW--1862/2024-26
KANNADA DAILY PAPER
ಕನ್ನಡ ದಿನಪತ್ರಿಕೆ

ಸಂಪುಟ: 11
Vol:11
ಸಂಚಿಕೆ: 133
Issuse:133
ದಿನಾಂಕ:29-06-2024
Date:29-06-2024
ಶನಿವಾರ Saturday
ಪುಟ:4 Page:4
ರೂ.: 3-00 Rs.3-00

ಸಂಪಾದಕರು: ಎಸ್.ಕೆ.ಒಡೆಯರ್ ಉಪಸಂಪಾದಕರು: ಸುಚಿತ್ರ ಎಸ್. ಒಡೆಯರ್ ಎಂಬಿಎ ಗೌರವ ಸಂಪಾದಕರು: ಗುರುರಾಜು ಎಂ., ಫೋ: 080-31212322 ಮೊ.: 9902543494 E-mail:sahayavany@gmail.com

# ಭೀಕರ ಅಪಘಾತ: 13 ಸಾವು

## ಪುಣೆ- ಬೆಂಗಳೂರು ರಾ. ಹೆದ್ದಾರಿಯಲ್ಲಿ ನಿಂತಿದ್ದ ಲಾರಿಗೆ, ಟಿಟಿ ವಾಹನ ಡಿಕ್ಕಿ- ನಾಲ್ವರಿಗೆ ಗಾಯ



ಹಾವೇರಿ:-

ನಿಂತಿದ್ದ ಲಾರಿಗೆ ಹಿಂದಿನಿಂದ ವೇಗವಾಗಿ ಬಂದ ಟೆಂಪೋ ಟ್ರಾವೆಲ್ಲರ್ (ಟಿಟಿ) ಡಿಕ್ಕಿ ಹೊಡೆದು ಸಂಭವಿಸಿದ ಭೀಕರ ಅಪಘಾತದಲ್ಲಿ 7 ಮಂದಿ ಮಹಿಳೆಯರು ಸೇರಿ 13 ಮಂದಿ ಸ್ಥಳದಲ್ಲೇ ಮೃತಪಟ್ಟ ದಾರುಣ ಘಟನೆ ಬ್ಯಾಡಗಿ ತಾಲೂಕಿನ ಗುಂಡೇನಹಳ್ಳಿ ಕ್ರಾಸ್ ಬಳಿ ಇಂದು ಮುಂಜಾನೆ ನಡೆದಿದೆ.

ಬ್ಯಾಡಗಿ ತಾಲೂಕಿನ ಗುಂಡೇನಹಳ್ಳಿ ಕ್ರಾಸ್ ಬಳಿಯ ಬೆಂಗಳೂರು- ಪುಣೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿ ಟಿಟಿ ವಾಹನದಲ್ಲಿದ್ದ 7 ಮಂದಿ ಮಹಿಳೆಯರು ಸೇರಿದಂತೆ 13 ಜನ ಮೃತಪಟ್ಟಿದ್ದಾರೆ.

### ಗ್ರಾಮದಲ್ಲಿ ಸೂತಕದ ಛಾಯೆ

ಅಪಘಾತದಲ್ಲಿ 13 ಮಂದಿ ಸಾವಿನ ಸುದ್ದಿ ಕೇಳಿ ಎಮ್ಮೆಹಟ್ಟಿ ಗ್ರಾಮದಲ್ಲಿ ಸೂತಕದ ಛಾಯೆ ಆವರಿಸಿದೆ. ಮೃತ ವಿಶಾಲಾಕ್ಷಮ್ಮ, ಆದರ್ಶ್, ನಾಗೇಶ್, ಭಾಗ್ಯ, ಮಾನಸ, ಸುಭದ್ರತಾಯಿ ಮೂಲತಃ ಎಮ್ಮೆಹಟ್ಟಿ ಗ್ರಾಮದವರಾಗಿದ್ದು,ಅಲ್ಲಿನ ಜನತೆ ನೋವಿನಲ್ಲಿದ್ದಾರೆ. ಪರಶುರಾಮ್, ರೂಪ ದಂಪತಿಗಳು ಶಿವಮೊಗ್ಗ ನಗರದ ಹಾಲ್ಕೋಳ ನಿವಾಸಿಗಳು. ಮಂಜುಳಬಾಯಿ, ಮಂಜುಳ ಭದ್ರಾವತಿ ತಾಲೂಕಿನ ಕಲ್ಯಾಳ್ ಸರ್ಕಲ್‌ನವರು. ಅಂಜು ಕಡೂರು ತಾಲೂಕಿನ ಬೀರೂರು ನಿವಾಸಿ. ಪುಣ್ಯ ಬಾಯಿ ಭದ್ರಾವತಿ ತಾಲೂಕಿನ ಮಾಚೇನಹಳ್ಳಿ ಹಾಲಿನ ಡೈರಿ ಗ್ರಾಮದ ನಿವಾಸಿಯಾಗಿದ್ದಾರೆ. ಎಮ್ಮೆಹಟ್ಟಿ ಗ್ರಾಮದ ಶಾಲಾ ಆವರಣದಲ್ಲಿ ಮೃತರ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಎಮ್ಮೆಹಟ್ಟಿ ಗ್ರಾಮದ ಹಿಂದೂ ರುದ್ರಭೂಮಿಯಲ್ಲಿ ಅಂತ್ಯಸಂಸ್ಕಾರಕ್ಕೆ ಸಿದ್ಧತೆ ಮಾಡಲಾಗಿದೆ.

### ಪರಿಹಾರಕ್ಕೆ ಬೊಮ್ಮಾಯಿ ಆಗ್ರಹ

ಇಂದು ಬೆಳಗಿನ ಜಾವ ಹಾವೇರಿ ಜಿಲ್ಲೆ ಬ್ಯಾಡಗಿ ತಾಲೂಕಿನ ಗುಂಡೇನಳ್ಳಿ ಕ್ರಾಸ್ ಬಳಿ ನಡೆದ ಭೀಕರ ಅಪಘಾತದಲ್ಲಿ 13 ಜನರು ಸಾವಿಗೀಡಾಗಿರುವ ಸುದ್ದಿ ಕೇಳಿ ಆಘಾತವಾಗಿದೆ. ಎಂದು ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ದೇವರು ಮೃತರ ಆತ್ಮಕ್ಕೆ ಶಾಂತಿ ನೀಡಲಿ, ಅವರ ಅಗಲಿಕೆಯ ದುಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬಸ್ಥರಿಗೆ ಭಗವಂತ ನೀಡಲಿ ಎಂದು ಪ್ರಾರ್ಥಿಸುತ್ತೇನೆ. ರಾಜ್ಯ ಸರ್ಕಾರ ಮೃತರ ಕುಟುಂಬಗಳಿಗೆ ಮುಖ್ಯಮಂತ್ರಿ ಪತಿಹಾರ ನಿಧಿಯಿಂದ ಸೂಕ್ತ ಪರಿಹಾರ ನೀಡಬೇಕು. ಹಾಗೂ ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ಒದಗಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಶಿವಮೂಗ್ಗ ಜಿಲ್ಲೆಯ ಭದ್ರಾವತಿ ತಾಲೂಕಿನ ಎಮ್ಮೆಹಟ್ಟಿ ಗ್ರಾಮದ ಪರಶುರಾಮ್ (45), ಭಾಗ್ಯ (40), ನಾಗೇಶ (50), ವಿಶಾಲಾಕ್ಷಿ (40), ಅರ್ಪಿತಾ (18), ಸುಭದ್ರಾ ಬಾಯಿ (65), ಪುಣ್ಯ (50), -3ನೇ ಪುಟಕ್ಕೆ

## ಸಿದ್ದು ಎಷ್ಟು ದಿನ ಸಿಎಂ ಆಗಿರುತ್ತಾರೋ ಗೊತ್ತಿಲ್ಲ ಬಿವೈವಿ ವ್ಯಂಗ್ಯ

ಬೆಂಗಳೂರು:-



ಕಾಂಗ್ರೆಸ್‌ನಲ್ಲಿ ಉಪಮುಖ್ಯಮಂತ್ರಿ ಹುದ್ದೆ ಸೃಷ್ಟಿ, ಸಿಎಂ ಕುರ್ಚಿ ಬಿಡಬೇಕು ಗದ್ದಲ ಜೋರಾಗಿದ್ದು, ಸಿದ್ದರಾಮಯ್ಯ ಎಷ್ಟು ದಿನ ಮುಖ್ಯಮಂತ್ರಿಯಾಗಿರುತ್ತಾರೋ ಗೊತ್ತಿಲ್ಲ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ರವರನ್ನು ಬಲಿ ಹಾಕಬೇಕೆಂದು ಡಿಸಿಎಂ ಹುದ್ದೆಗಳ ಸೃಷ್ಟಿ ವಿಚಾರ ತಂದರು. ಈಗ ಸಿದ್ದರಾಮಯ್ಯ ಬುಡಕ್ಕೆ ಬಂದಿದೆ. ಸಿದ್ದರಾಮಯ್ಯ ಎಷ್ಟು ದಿನ ಸಿಎಂ ಆಗಿರುತ್ತಾ-ರೋ ಗೊತ್ತಿಲ್ಲ ಎಂದು ಹೇಳಿದರು. ಸಿಎಂ, ಡಿಸಿಎಂ, ಸಚಿವರ ಗದ್ದಲ ಹೆಚ್ಚಾಗಿದೆ. ಸಿಎಂ, ಡಿಸಿಎಂ, ಸಚಿವರು ಹಾದಿ-ಬೀದಿಯಲ್ಲಿ ಹೊಡೆದಾಡುಕೊಳ್ಳುತ್ತಿದ್ದಾರೆ ಜನ. ಈ ಸರ್ಕಾರದ ವಿರುದ್ಧ ವಿಶ್ವಾಸ ಕಳೆದುಕೊಳ್ಳುತ್ತಿದ್ದು, ಬಿಜೆಪಿ ಹೋರಾಟದ ಮೂಲಕ ಸರ್ಕಾರಕ್ಕೆ ಬಿಸಿ ಮುಟ್ಟಿಸುವ ಕೆಲಸ ಮಾಡಲಿದೆ ಎಂದು ಅವರು ತಿಳಿಸಿದರು. ಲೋಕಸಭಾ ಚುನಾವಣೆಗೂ ಮುಂಚೆ ಸಿದ್ದರಾಮಯ್ಯ, -3ನೇ ಪುಟಕ್ಕೆ

## ಸಂಸತ್ ಕಲಾಪ ಮುಂದೂಡಿಕೆ: ನೀಟ್ ಪ್ರತಿಧ್ವನಿ



ನವದೆಹಲಿ,ಜೂ.28-

ನೀಟ್- ಯುಜಿ ಪರೀಕ್ಷೆಯಲ್ಲಿನ ಅವ್ಯವಹಾರ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯವನ್ನು ಬೀದಿಗೆ ಬರುವಂತೆ ಮಾಡಿದೆ.ಈ ಬಗ್ಗೆ ಸಮಗ್ರ ಚರ್ಚೆಗೆ ಅವಕಾಶ ಮಾಡಿಕೊಡುವಂತೆ ಪ್ರತಿ ಪಕ್ಷ ಕಾಂಗ್ರೆಸ್ ಹಾಗು ಇಂಡಿಯಾ ಮೈತ್ರಿಕೂಟ ಒತ್ತಾಯಿಸಿದ ಹಿನ್ನೆಲೆಯಲ್ಲಿ ಆಡಳಿತ ಮತ್ತು ಪ್ರತಿ ಪಕ್ಷದ ಸದಸ್ಯರ ಮಾತಿನಚಕಮಕಿ ಗದ್ದಲ,ಕೋಲಾಹಲ ಉಂಟಾದ ಹಿನ್ನೆಲೆಯಲ್ಲಿ ಸಂಸತ್ ಕಲಾಪವನ್ನು ಜು.1 ಕ್ಕೆ ಮುಂದೂಡಲಾಗಿದೆ.

ಲೋಕಸಭೆಯಲ್ಲಿ ಪ್ರತಿ ಪಕ್ಷದ ನಾಯಕ ರಾಹುಲ್ ಗಾಂಧಿ ಹಾಗೂ ರಾಜ್ಯಸಭೆಯಲ್ಲಿ ಪ್ರತಿ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಮತ್ತು ಎರಡೂ ಸದನದಲ್ಲಿ ಇಂಡಿಯಾ ಮೈತ್ರಿಕೂಟದ ಸದಸ್ಯರು ನೀಟ್ ಚರ್ಚೆಗೆ ಬಿಗಿ ಪಟ್ಟು ಹಿಡಿದಿದ್ದರಿಂದ ಉಭಯ ಸದನಗಳ ಕಲಾವವನ್ನು ಪೀಠಾಧ್ಯಕ್ಷರು ಸೋಮವಾರಕ್ಕೆ ಮುಂದೂಡಿದರು.

ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ನೀಟ್ ಅವ್ಯವಹಾರಗಳ ಬಗ್ಗೆ ಸಮಗ್ರ ಚರ್ಚೆ ಆಗಬೇಕು ಪ್ರಧಾನಿ ನರೇಂದ್ರ ಮೋದಿ ಉತ್ತರ ನೀಡಬೇಕು ಎಂದು ಒತ್ತಾಯಿಸಿದರು ಅವರ ಬೇಡಿಕೆಗೆ ವಿರೋಧಪಕ್ಷಗಳ ಹಲವು ಸದಸ್ಯರು ಧ್ವನಿಗೂಡಿಸಿ ಸಮಗ್ರ ಚರ್ಚೆ ನಡೆಸಬೇಕು ಎಂದು ಆಗ್ರಹಿಸಿದರು ಇದ-

## ಗೃಹರಕ್ಷಕ ಡಿಜಿಪಿ ಕಮಲ್ ಪಂತ್ ನಿವೃತ್ತಿ

ಬೆಂಗಳೂರು:-




ನಗರ ಪೊಲೀಸ್ ಆಯುಕ್ತರಾಗಿ ಹಲವು ಕಠಿಣ ಸವಾಲುಗಳನ್ನು ಸಮರ್ಥವಾಗಿ ನಿಭಾಯಿಸಿದ್ದ ಗೃಹರಕ್ಷಕ ಮತ್ತು ಅಗ್ನಿಶಾಮಕದಳದ ಪೊಲೀಸ್ ಮಹಾನಿರ್ದೇಶಕ (ಡಿಜಿಪಿ) ಕಮಲ್ ಪಂತ್ ಅವರು ಇನ್ನೆರಡು ದಿನ(ಜೂ.30)ಗಳಲ್ಲಿ ಸೇವೆಯಿಂದ ನಿವೃತ್ತರಾಗಲಿದ್ದಾರೆ. ಕರ್ನಾಟಕ ಕೇಡರ್ ನ 1992ರ ಬ್ಯಾಚ್ ನ ಐಪಿಎಸ್ ಅಧಿಕಾರಿಯಾಗಿದ್ದ ಉತ್ತರಾಖಂಡ ಮೂಲದ ಕಮಲ್ ಪಂತ್ ಅವರು ರಾಜ್ಯ ಪೊಲೀಸ್ ಇಲಾಖೆಯಲ್ಲಿ 34 ವರ್ಷಗಳ ಕಾಲ ನಿಷ್ಕಳಂಕ, ನಿಷ್ಠಾವಂತ, ದಕ್ಷ ಹಾಗೂ ಪ್ರಾಮಾಣಿಕ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಖ್ಯಾತಿಗೆ ಪಾತ್ರರಾಗಿದ್ದಾರೆ.

ರಾಜ್ಯದಲ್ಲಿ ಸಹಾಯಕ ಪೊಲೀಸ್ ಅಧೀಕ್ಷಕರಾಗಿ ಶಿವಮೊಗ್ಗದಲ್ಲಿ ಸೇವೆ ಆರಂಭಿಸಿದ್ದ ಕಮಲ್ ಪಂತ್ ಅವರು ಶಿವಮೊಗ್ಗ ಸೇರಿ ಹಲವು ಜಿಲ್ಲೆಗಳ ಎಸ್‌ಪಿಯಾಗಿ ಕೇಂದ್ರವಲಯದ ಐಜಿಪಿ ನಗರದ ಹೆಚ್ಚುವರಿ ಪೊಲೀಸ್ ಆಯುಕ್ತರಾಗಿ ಅಲ್ಲಿಂದ ಎಡಿಜಿಪಿ ಹುದ್ದೆಗೆ ಬಡ್ತಿ ಪಡೆದರು. ಆಡಳಿತ, ಕಾನೂನು ಸುವ್ಯವಸ್ಥೆ, ಗುಪ್ತಚರದಳದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ(ಎಡಿಜಿಪಿ)ರಾಗಿ ಬಳಿಕ ನಗರ ಪೊಲೀಸ್ ಆಯುಕ್ತರಾಗಿ ಕಮಲ್ ಪಂತ್ ನೇಮಕಗೊಂಡಿದ್ದರು.

ಡಿಜಿಪಿ ಹುದ್ದೆಗೆ ಬಡ್ತಿ ಹೊಂದಿದರೂ ಎರಡು ಬಾರಿ ನಗರ ಪೊಲೀಸ್ ಕಮೀಷನರ್ ಹುದ್ದೆಗೆ ವಿಸ್ತರಣೆ ಹೊಂದಿದ ಕಮಲ್ ಪಂತ್ -3ನೇ ಪುಟಕ್ಕೆ

## ಏರ್‌ಪೋರ್ಟ್ ಟರ್ಮಿನಲ್-1ರ ಮೇಲ್ಛಾವಣಿ ಕುಸಿದು ಓರ್ವ ಸಾವು



ನವದೆಹಲಿ:-

ರಾಜಧಾನಿ ನವದೆಹಲಿಯ ವಿಮಾನ ನಿಲ್ದಾಣದ ಟರ್ಮಿನಲ್ ಒಂದರ ಮೇಲ್ಛಾವಣಿ ಕುಸಿದು ಓರ್ವ ಮೃತಪಟ್ಟು ಐವರು ಗಾಯಗೊಂಡಿದ್ದಾರೆ. ಏಕಾಏಕಿ ಟರ್ಮಿನಲ್ 1-ರ ಮೇಲ್ಛಾವಣಿ ಕುಸಿದು ಬಿದ್ದಿರುವುದು ಕಳಪೆ ಕಾಮಗಾರಿ ಕಾರಣ ಎಂಬ ಅನುಮಾನಗಳು ವ್ಯಕ್ತವಾಗಿವೆ.

ದುರಂತದ ಹಿನ್ನೆಲೆಯಲ್ಲಿ ಪರಿಹಾರ ಕಾರ್ಯ ನಡೆಯುತ್ತಿರುವ ಹಿನ್ನೆಲೆಯಲ್ಲಿ ಇಂದು ಮಧ್ಯಾಹ್ನ 2 ಗಂಟೆಯವರೆಗೆ ಟರ್ಮಿನಲ್ 1-ಅನ್ನು ಬಂದ್ ಮಾಡಲಾಗಿದೆ.

ಮೇಲ್ಛಾವಣಿ ಕುಸಿದಿದ್ದರಿಂದ ಕಾರುಗಳು, ಟ್ಯಾಕ್ಸಿಗಳು ಜಖಂಗೊಂಡಿವೆ. ದುರಂತ ಸಂಭವಿಸಿದ ತಕ್ಷಣವೇ ಅಗ್ನಿಶಾಮಕ ವಾಹನಗಳು ಸ್ಥಳಕ್ಕೆ ದೌಡಾಯಿಸಿತು. ಟರ್ಮಿನಲ್ ಒಂದರ ಕಟ್ಟಡದ ಬಳಿಕ ಸಮಗ್ರ ಪರಿಶೀಲನೆ ನಡೆಸಿತು. ಆದರೆ ಅವಶೇಷಗಳಡಿಯಲ್ಲಿ ಯಾರೊಬ್ಬರು ಸಿಕ್ಕಿ ಹಾಕಿಕೊಂಡರಲಿಲ್ಲ.

ಈ ಬಗ್ಗೆ ವಿಮಾನ ನಿಲ್ದಾಣ ಅಧಿಕಾರಿಯೊಬ್ಬರು ಪ್ರತಿಕ್ರಿಯೆ ನೀಡಿ ಓರ್ವ ಮೃತಪಟ್ಟಿದ್ದು ಇನ್ನಿತರು ಐವರು ಗಾಯಗೊಂಡಿದ್ದಾರೆ. ಅವರನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಟರ್ಮಿನಲ್ ಒಂದರ -3ನೇ ಪುಟಕ್ಕೆ

## ವಾಲ್ಮೀಕಿ ಹಗರಣ: ಡಿಸಿ ಕಚೇರಿ ಎದುರು ಪ್ರತಿಭಟನೆ

ಬೆಂಗಳೂರು:-

ಮಹರ್ಷಿ ವಾಲ್ಮೀಕಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ಇಂದು ರಾಜ್ಯಾದ್ಯಂತ ಎಲ್ಲ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿತು.

ಮಹರ್ಷಿ ವಾಲ್ಮೀಕಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಜವಾಬ್ದಾರಿ ಹೊರಬೇಕು ಹಾಗೂ ಸಚಿವ ಶರಣ ಪ್ರಕಾಶ್ ಪಾಟೀಲ್, ನಿಗಮದ ಅಧ್ಯಕ್ಷ ಬಸವರಾಜ್ ದದ್ದಲ್ ಅವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಇಂದು ರಾಜ್ಯಾದ್ಯಂತ ಎಲ್ಲ ಜಿಲ್ಲಾಧಿಕಾರಿಗಳ ಕಚೇರಿ ಮುತ್ತಿಗೆ ಕಾರ್ಯಕ್ರಮ ನಡೆಸಿದ್ದು, ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಬಿಜೆಪಿ ಕಾರ್ಯಕರ್ತರು, ಮುಖಂಡರು ಪ್ರತಿಭಟನೆ ನಡೆಸಿದರು.

ಬೆಂಗಳೂರು, ತುಮಕೂರು, ಮೈಸೂರು, ಚಿಕ್ಕಮಗಳೂರು, ಬೆಳಗಾವಿ, ಹುಬ್ಬಳ್ಳಿ-ಧಾರವಾಡ, ದಾವಣಗೆರೆ ಸೇರಿದಂತೆ ರಾಜ್ಯದ ಎಲ್ಲ ಜಿಲ್ಲೆಗಳಲ್ಲೂ ಬಿಜೆಪಿ ಕಾರ್ಯಕರ್ತರು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನಾ ಧರಣಿ ನಡೆಸಿದರು.



ಚಿತ್ರದುರ್ಗದಲ್ಲಿ ವಿಜಯೇಂದ್ರ ಭಾಗಿ ಚಿತ್ರದುರ್ಗದಲ್ಲಿ ನಡೆದ ಜಿಲ್ಲಾಧಿಕಾರಿಗಳ ಕಚೇರಿ ಮುತ್ತಿಗೆ ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಭಾಗಿಯಾಗಿ, ವಾಲ್ಮೀಕಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಹಣಕಾಸು ಸಚಿವರಾಗಿರುವ ಮುಖ್ಯಮಂತ್ರಿ ಸಿದ್ಧರಾಮಯ್ಯ ಜವಾಬ್ದಾರಿ ಹೊರಬೇಕು. ಅಲ್ಲದೆ ಈ ಹಗರಣಕ್ಕೆ ಸಂಬಂಧಿಸಿದಂತೆ ಸಚಿವ ಶರಣ ಪ್ರಕಾಶ್ ಪಾಟೀಲ್, ನಿಗಮದ ಅಧ್ಯಕ್ಷ ಬಸವರಾಜ್ ದದ್ದಲ್ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಕಾಂಗ್ರೆಸ್ ಸರ್ಕಾರ ದಲಿತರ ಹಣವನ್ನು ಲೂಟಿ ಮಾಡುತ್ತಿದೆ ಎಂದು ಪ್ರತಿಭಟನಾನಿರತ ಬಿಜೆಪಿ ಕಾರ್ಯಕರ್ತರು ಘೋಷಣೆಗಳನ್ನು ಕೂಗಿ ಸರ್ಕಾರದ ವಿರುದ್ಧ ಧಿಕ್ಕಾರ ಹಾಕಿದರು.**ಹೋರಾಟ ನಿಲ್ಲದು:**

ಬಿ.ವೈ.ವಿಜಯೇಂದ್ರ ಹೇಳಿಕೆ ಚಿತ್ರದುರ್ಗ-ಕ್ಕೆ ತೆರಳುವ ಮುನ್ನ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು, ವಾಲ್ಮೀಕಿ ನಿಗಮದಲ್ಲಿ -3ನೇ ಪುಟಕ್ಕೆ

## ಅಭಿವೃದ್ಧಿ ಕಾರ್ಯದಲ್ಲಿ ರಾಜಕೀಯ ಇಲ್ಲ: ಸಿಎಂ

ನವದೆಹಲಿ:-

ಅಭಿವೃದ್ಧಿ ಕೆಲಸಗಳಲ್ಲಿ ನಾವು ರಾಜಕೀಯ ಬೆರೆಸಲ್ಲ. ಕರ್ನಾಟಕ ನೆಲ, ಜಲ, ಭಾಷೆ, ಸಂಪನ್ಮೂಲ ವಿಚಾರವಾಗಿ ರಾಜಕೀಯ ಮಾಡಲ್ಲ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.

ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು, ನಿನ್ನೆ ರಾಜ್ಯದ ಹೊಸ ಸಂಸದರ ಜತೆ ಸಭೆ ನಡೆಸಿದ್ದೇನೆ. ಕೇಂದ್ರದ ಮಂತ್ರಿಗಳು ಈ ಸಭೆಯಲ್ಲಿ ಭಾಗಿಯಾಗಿದ್ದರು. ಕೇಂದ್ರದ ಮುಂದೆ ರಾಜ್ಯದ ಪ್ರಸ್ತಾವನೆಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಸಭೆ ಸೌಹಾರ್ದಯುತವಾಗಿ ನಡೆಯಿತು. ನಮ್ಮ ಉದ್ದೇಶ ರಾಜ್ಯದಿಂದ ಕೇಂದ್ರಕ್ಕೆ ಕಳುಹಿಸುವ ಪ್ರಸ್ತಾವನೆಗಳನ್ನು ಸಂಸದರ ಗಮನಕ್ಕೆ ತರುವುದಾಗಿತ್ತು ಎಂದರು.

ಬಿಜೆಪಿ ಸಂಸದರು ನಿನ್ನೆ ನೀಡಿರುವ ಮನವಿ ಪತ್ರದಲ್ಲಿ ಅನೇಕ ಸುಳ್ಳುಗಳಿವೆ. ಮಹಾದಾಯಿ ಯೋಜನೆ ಈಗಾಗಲೇ ಇತ್ಯರ್ಥವಾಗಿದೆ. ಆದರೆ ಅವರು ಕೋರ್ಟ್‌ನಲ್ಲಿ ಪ್ರಕರಣ ಇದೆ ಎನ್ನುತ್ತಾರೆ ನ್ಯಾಯಾಧೀಕರಣದ ತೀರ್ಪು ಆಧರಿಸಿ ನಾವು ಟೆಂಡರ್ ಮಾಡಿದ್ದೇವೆ.



ಕೇಂದ್ರ ಅರಣ್ಯ ಇಲಾಖೆ ಅನುಮತಿ ನೀಡಬೇಕಿದೆ. ಇದಕ್ಕೆ ಕೋರ್ಟ್‌ನಲ್ಲಿ ಕೇಸ್ ಇದೆ ಎನ್ನುವುದು ಸರಿಯಲ್ಲ ಎಂದು ಹೇಳಿದರು.ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಹಣ ಬಿಡುಗಡೆ ಮಾಡಿಲ್ಲ. ಇದನ್ನು ಕೇಳಿದರೆ ತಾಂತ್ರಿಕ ಸಮಸ್ಯೆ ಇದೆ ಎಂದು ನಿನ್ನೆ ಪತ್ರದಲ್ಲಿ ತಿಳಿಸಿದ್ದಾರೆ. ಅಂತಹ ಯಾವುದೇ ತಾಂತ್ರಿಕ ಸಮಸ್ಯೆ ಇಲ್ಲ. ಆ ಸಮಸ್ಯೆ ಬಗ್ಗೆ ಕೇಂದ್ರ ಸರ್ಕಾರ ತಿಳಿಸಿಲ್ಲ ಎಂದರು.ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಮಾಡಬೇಕು ಅಂತ ಹಿಂದಿನ ಬಿಜೆಪಿ ಸರ್ಕಾರ ಘೋಷಣೆ ಮಾಡಿತ್ತು. ಈಗ ಈ ಹಣ ಕೊಡುವುದಾಗಿ ಹಣಕಾಸು ಸಚಿವರು ಒಪ್ಪಿದ್ದಾರೆ. ಕೊಡುತ್ತಾರೆ ಎಂಬ ಆಶಾಭಾವನೆ ಇದೆ ಎಂದು -3ನೇ ಪುಟಕ್ಕೆ

## ಸ್ವಾತಂತ್ರ್ಯ ದಿನ ವಂದೇ ಭಾರತ್ ಸ್ಲೀಪರ್ ರೈಲು ಸಂಚಾರ



ನವದೆಹಲಿ:-

ದೇಶದ ಮೊಟ್ಟ ಮೊದಲ ವಂದೇ ಭಾರತ್ ಸ್ಲೀಪರ್ ರೈಲು ಸ್ವಾತಂತ್ರ್ಯ ದಿನದಂದು ದೆಹಲಿ ಮತ್ತು ಮುಂಬೈ ನಡುವೆ ಸಂಚಾರ ಆರಂಭಿಸುವ ಸಾಧ್ಯತೆ ಇದೆ.ವಂದೇ ಭಾರತ್ ಸ್ಲೀಪರ್ ರೈಲು ತಯಾರಿಕೆ ಬೆಂಗಳೂರಿನ ರೈಲು ಕಾರ್ಖಾನೆಯಲ್ಲಿ ಅಂತಿಮ ಹಂತದಲ್ಲಿದೆ. ವಂದೇ ಭಾರತ್ ಸ್ಲೀಪರ್ ರೈಲಿನಲ್ಲಿ ಒಟ್ಟು 16 ಕೋಚ್‌ಗಳಿವೆ ಎನ್ನಲಾಗಿದೆ.16 ಬೋಗಿಗಳಲ್ಲಿ 10 ಬೋಗಿಗಳು 3ಎಸಿಗೆ, 4 ಬೋಗಿಗಳು ಸೆಕೆಂಡ್ ಎಸಿಗೆ ಮತ್ತು ಒಂದು ಬೋಗಿ ಫಸ್ಟ್ ಕ್ಲಾಸ್ ಎಸಿಗೆ ಮೀಲಿರಿಸಲಾಗಿದೆ. ಸ್ಲೀಪರ್ ವಂದೇ ಭಾರತ್ ರೈಲು ಎರಡು ಸೀಟಿಂಗ್ ಕಮ್ ಲಗೇಜ್ ರೇಕ್ ಕೋಚ್‌ಗಳನ್ನು ಸಹ ಹೊಂದಿರಲಿದೆ ಎನ್ನಲಾಗಿದೆ. -3ನೇ ಪುಟಕ್ಕೆ

# ಮಾದಕ ದ್ರವ್ಯ ಸೇವನೆಯಿಂದ ಆರೋಗ್ಯ ಹಾಳು: ಡಾ.ದೊಡ್ಡಮನಿ



ಕಲಬುರಗಿ:-

ನಗರ ಪೊಲೀಸ್ ಆಯುಕ್ತಾಲಯ ದಕ್ಷಿಣ ಉಪ ವಿಭಾಗದ ಸ್ಟೇಷನ್ ಬಜಾರ್ ಪೊಲೀಸ್ ಠಾಣೆ ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಸಂಯುಕ್ತ ಆಶ್ರಯದಲ್ಲಿ ಅಂತಾರಾಷ್ಟ್ರೀಯ ಮಾದಕ ದ್ರವ್ಯ ಮತ್ತು ಕಳ್ಳಸಾಗಣೆ ವಿರೋಧಿ ದಿನವನ್ನು ಬುಧವಾರ ನಗರದ ಸ್ಟೇಷನ್ ಬಜಾರ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜಿನಲ್ಲಿ ಆಚರಿಸಲಾಯಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಎನ್‌ಎಸ್‌ಎಸ್ ವಿಭಾಗಿಯ ಅಧಿಕಾರಿ ಡಾ.ಚಂದ್ರಶೇಖರ್ ದೊಡ್ಡಮನಿ ಮಾತನಾಡಿ, ಇಂದಿನ ಯುವ ಜನತೆಯು ಮೋಜು, ಮಸ್ತಿ, ತಡ ರಾತ್ರಿಯ ಪಾರ್ಟಿ ಎಂದು ಜೀವನ ಶೈಲಿಯನ್ನೇ ಬದಲಾಯಿಸಿಕೊಂಡಿದ್ದಾರೆ. ಇದರಿಂದ ಹದಿಹರೆಯದ ವಯಸ್ಸಿನಲ್ಲಿ ಹಾದಿ ತಪ್ಪುವುದು ಸರ್ವೇ ಸಾಮಾನ್ಯವಾಗಿ ಬಿಟ್ಟಿದೆ. ಹೀಗಾಗಿ ಯುವಕರಂತೂ ಮಾದಕ ವಸ್ತುಗಳಿಗೆ ದಾಸರಾಗುತ್ತಿದ್ದು, ಇದರಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಮಾದಕ ವಸ್ತುಗಳ ಮಾರಾಟ ಹಾಗೂ ಸಾಗಾಣೆ ಕಾನೂನ ಬಾಹಿರ ಚಟುವಟಿಕೆಯೆಂದು ತಿಳಿದಿದ್ದರೂ ಇದರಲ್ಲಿ ತೊಡಗಿಸಿಕೊಂಡಿರುವ ಸಂಖ್ಯೆಯು ಹೆಚ್ಚಾಗುತ್ತಲೇ ಇದೆ. ಹೀಗಾಗಿ ಮಾದಕ ವ್ಯಸನ ಮತ್ತು ಇದರ ಕಳ್ಳ ಸಾಗಾಣಿಕೆಯಂತಹ ಚಟುವಟಿಕೆಗಳಿಂದ ಜನರನ್ನು ರಕ್ಷಿಸಲು ಹಾಗೂ ಈ ಬಗ್ಗೆ ಅರಿವು ಮೂಡಿಸುವ ದೃಷ್ಟಿಯಿಂದ ಪ್ರತಿ ವರ್ಷ ಜೂನ್ 26ರಂದು ಅಂತಾರಾಷ್ಟ್ರೀಯ ಮಾದಕ ದ್ರವ್ಯ ಮತ್ತು ಕಳ್ಳಸಾಗಣೆ ವಿರೋಧಿ ದಿನವನ್ನು ವಿಶ್ವದಾದ್ಯಂತ ಆಚರಿಸಲಾಗುತ್ತದೆ ಎಂದರು.

ಪೊಲೀಸ್ ಪೇದೆ ವಿಠಲ್ ವಿಶೇಷ ಉಪನ್ಯಾಸ ನೀಡಿ, ಅಂತರರಾಷ್ಟ್ರೀಯ ಮಾದಕ ದ್ರವ್ಯ ಮತ್ತು ಕಳ್ಳಸಾಗಣೆ ವಿರೋಧಿ ದಿನದ ಇತಿಹಾಸದ ಬಗ್ಗೆ ವಿವರಿಸಿದರು. ಯುವ ಸಮೂಹವನ್ನು ಮಾದಕ ದ್ರವ್ಯ ಸೇವನೆಯಿಂದ ಮುಕ್ತಗೊಳಿಸುವ ನಿಟ್ಟಿನಲ್ಲಿ 1986ರ ಜೂನ್ 26ರಂದು ವಿಶ್ವ ಸಂಸ್ಥೆಯ ಸಾಮಾನ್ಯ ಸಭೆಯಲ್ಲಿ 'ಅಂತಾರಾಷ್ಟ್ರೀಯ ಮಾದಕ ದ್ರವ್ಯ ಮತ್ತು ಕಳ್ಳಸಾಗಣೆ ವಿರೋಧಿ ದಿನ'ವನ್ನು ಆರಂಭಿಸಲಾಯಿತು. ಆದಾದ ಬಳಿಕ ವಿಶ್ವಸಂಸ್ಥೆಯು 1997ರಲ್ಲಿ 'ಮಾದಕ ದ್ರವ್ಯ ಮತ್ತು ಅಪರಾಧ ವಿಭಾಗ'ವನ್ನು ಆರಂಭಿಸಿತು. ಕಾನೂನು ಬಾಹಿರ ಚಟುವಟಿಕೆಗಳಿಂದ ಯುವ ಸಮೂಹವನ್ನು ರಕ್ಷಣೆ ಮಾಡುವ ಉದ್ದೇಶವನ್ನು ಈ ದಿನವು ಹೊಂದಿದೆ ಎಂದರು.

ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ಪಾಂಡು ಎಲ್ ರಾಠೋಡ್ ಮಾತನಾಡಿ, ಅಂತಾರಾಷ್ಟ್ರೀಯ ಮಾದಕ ದ್ರವ್ಯ ಮತ್ತು ಕಳ್ಳಸಾಗಣೆ ವಿರೋಧಿ ದಿನದ ಮಹತ್ವ ಹಾಗೂ ಆಚರಣೆ, ಮಾದಕ ವ್ಯಸನಕ್ಕೆ ದಾಸರಾಗುವುದರಿಂದ ಆರೋಗ್ಯದ ಮೇಲಾಗುವ ಪರಿಣಾಮಗಳು ಹಾಗೂ ಈ ಕಳ್ಳ ಸಾಗಾಣಿಕೆಯಂತಹ ಚಟುವಟಿಕೆಗಳಿಂದ ವಿದ್ಯಾರ್ಥಿಗಳನ್ನು ಹಾಗೂ ಯುವಸಮೂಹವನ್ನು ರಕ್ಷಿಸಲು ಹಾಗೂ ಜಾಗೃತಿ ಮೂಡಿಸುವ ಉದ್ದೇಶದಿಂದ ಈ ದಿನವು ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಈ ದಿನದಂದು ಸಮುದಾಯ ಸಂಸ್ಥೆಗಳು, ಶಾಲಾ ಕಾಲೇಜುಗಳು ಸೇರಿದಂತೆ ಇನ್ನಿತ್ತರ ಸಂಸ್ಥೆಗಳು ವಿದ್ಯಾರ್ಥಿಗಳಲ್ಲಿ ಹಾಗೂ ನಾಗರೀಕರಲ್ಲಿ ಮಾದಕ ದ್ರವ್ಯದ ಪರಿಣಾಮಗಳ ಕುರಿತು ಜಾಗೃತಿ ಮೂಡಿಸುವ ಸಲುವಾಗಿ ಸೆಮಿನಾಗಳು, ಜಾಥಗಳು ಹಾಗೂ ಅಭಿಯಾನಗಳಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತದೆ. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಮಾದಕ ದ್ರವ್ಯ ವಿರೋಧಿ ಪ್ರತಿಜ್ಞಾವಿಧಿಯನ್ನ ಬೋಧಿಸಲಾಯಿತು.

ಕಾರ್ಯಕ್ರಮದಲ್ಲಿ ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸೆಕ್ಟರ್ ಗಳಾದ ಇಂದಿರಾ , ವಂದನಾ, ಡಾ. ಶಿಲಾವತಿ ವಾಡೇಕರ್, ಮುಖ್ಯಪೇದೆ ಜ್ಯೋತಿ ಮುಂತಾದವರು ಉಪಸ್ಥಿತರಿದ್ದರು.

# ಸಂಗೀತದ ರಾಗಗಳಿಂದ ರೋಗ ನಿವಾರಣೆ



ಕಲಬುರಗಿ:-

ಸಂಗೀತವು ಇಂದಿನ ದಿನ ಮಾನದಲ್ಲಿ ಮನುಷ್ಯನಿಗೆ ಶಾಂತಿ ಮತ್ತು ನೆಮ್ಮದಿ ನೀಡುತ್ತಿದೆ. ಸಂಗೀತದ ರಾಗಗಳಿಂದ ರೋಗ ನಿವಾರಣೆ ಮಾಡಲಾಗುತ್ತದೆ ಎಂದು ವಿ.ಜಿ.ಮಹಿಳಾ ಮಹಾವಿದ್ಯಾಲಯದ ಸಂಗೀತ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಮುಖಿಮ್ ಮೀಯಾ ಅಭಿಪ್ರಾಯಪಟ್ಟರು.

ಗೋದುತಾಯಿ ದೊಡ್ಡಪ್ಪ ಅಪ್ಪ ಕಲಾ,ವಾಣಿಜ್ಯ ಮತ್ತು ವಿಜ್ಞಾನ ಪದವಿ ಮಹಿಳಾ ಮಹಾವಿದ್ಯಾಲಯದಲ್ಲಿ ಗುರುವಾರ ಸಂಗೀತ ವಿಭಾಗದ ವತಿಯಿಂದ ವಿಶ್ವಸಂಗೀತ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು. ಸಂಗೀತಕ್ಕೆ ಯಾವುದೇ ಜಾತಿ, ಧರ್ಮ ಸೀಮಿತವಾಗಿಲ್ಲ ಅದು ವಿಶ್ವವ್ಯಾಪಿಯಾಗಿದೆ. ಸಂಗೀತವು ನಮ್ಮ ಜೀವನದ ಪ್ರತಿಯೊಂದು ಭಾಗದಲ್ಲಿಯೂ ಪ್ರಮುಖ ಪಾತ್ರ ವಹಿಸುತ್ತದೆ. ಸಂತೋಷ, ಸಕಾರಾತ್ಮಕತೆ ಮತ್ತು ಮನರಂಜನೆ ತರುತ್ತದೆ. ಇದು ಭಾವನೆಗಳನ್ನು ಹೊತ್ತುಕೊಂಡು ವಿವಿಧ ಸಮಸ್ಯೆಗಳನ್ನು ಪರಿಹರಿಸುತ್ತದೆ. ಖಿನ್ನತೆ, ಅಘಾತ ಮತ್ತು ಆತಂಕದಲ್ಲಿ ಸಂಗೀತವು ಸಹಾಯಕವಾಗುತ್ತದೆ ಎಂದು ಹೇಳಿದರು.

ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ.ಪುಟ್ಟಮಣಿ ದೇವಿದಾಸ ಮಾತನಾಡಿ, ಸಂಗೀತವು ಪುರಾತನವಾದದ್ದು, ಗ್ರಾಮೀಣ ಪ್ರದೇಶಗಳಲ್ಲಿ ಜನರಿಂದ ಜನರಿಗೆ ಅನೇಕ ಜನಪದಗೀತೆಗಳು ಬೆಳೆದುಕೊಂಡು ಬಂದಿವೆ. ಸಂಗೀತವು ಪ್ರತಿಯೊಂದು ಜೀವಿಗಳಿಗೂ ಇಂಪನ್ನು ನೀಡುತ್ತದೆ. ಇಂದಿನ ಆಧುನಿಕ ಯುಗದಲ್ಲಿ ವೈದ್ಯರು ರೋಗಿಗಳಿಗೆ ಸಂಗೀತ ಆಲಿಸುವಂತೆ ಸೂಚಿಸುತ್ತಿದ್ದಾರೆ ಎಂದು ತಿಳಿಸಿದರು.

ನಂತರ ಆಕಾಶವಾಣಿ ಹಿರಿಯ ಸಂಗೀತ ಕಲಾವಿದರಾದ ಶಿವರುದ್ರಯ್ಯ ಕಲಬುರ್ಗಿಮಠ ಗೌಡಗಾಂವ ಇವರಿಂದ ವಿಶೇಷ ಸಂಗೀತ ಕಾರ್ಯಕ್ರಮ ನಡೆಯಿತು. ಮಹಾವಿದ್ಯಾಲಯದ ಐಕ್ಯೂಎಸಿ ಸಂಯೋಜಕರಾದ ಡಾ.ಸಿದ್ಧಲಿಂಗರೆಡ್ಡಿ, ವಿಭಾಗದ ಮುಖ್ಯಸ್ಥರಾದ ಡಾ.ಸೀಮಾ ಪಾಟೀಲ ವೇದಿಕೆ ಮೇಲಿದ್ದರು.

ಸಂಗೀತ ಪ್ರಾಧ್ಯಾಪಕರಾದ ವೀರಭದ್ರಯ್ಯ ಸ್ಥಾವರಮಠ ಸ್ವಾಗತಿಸಿ, ನಿರೂಪಿಸಿದರು. ಕು. ಅಕ್ಷತಾ ಹಿರೇಮಠ ಮತ್ತು ಕು.ಸ್ಫೂರ್ತಿ ಪಂಚಾಳ ಪ್ರಾರ್ಥಿಸಿದರು. ಮಹಾವಿದ್ಯಾಲಯದ ಶಿಕ್ಷಕ, ಶಿಕ್ಷಕೇತರರು ಮತ್ತು ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ನಾಡ ಕಛೇರಿಗೆ ಕುಡಿಯುವ ನೀರು- ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲು ಮನವಿ

ಕಲಬುರಗಿ:-

ನಗರದ ನಾಡ ಕಛೇರಿಯಲ್ಲಿ ವಾಹನಗಳ ನಿಲುಗಡೆ ವ್ಯವಸ್ಥೆ ಹಾಗೂ ಹಳ್ಳಿಗಳಿಂದ ಬಂದಂತಹ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವಂತೆ ಕಂದಾಯ ಸಚಿವರಾದ ಕೃಷ್ಣಭೈರೆಗೌಡರಿಗೆ ಜೈಕನ್ನಡಿಗರ ಸೇನೆ ಅಧ್ಯಕ್ಷ ದತ್ತು ಎಚ್.ಭಾಸಗಿ ಅವರು ಮನವಿ ಸಲ್ಲಿಸಿ ಒತ್ತಾಯಿಸಿದ್ದಾರೆ. ನಗಗರದ ನಾಡ ಕಛೇರಿಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಸಲುವಾಗಿ ಬರುವ ಸಾರ್ವಜನಿಕರಿಗೆ ವಾಹನಗಳ ನಿಲುಗಡೆ ಮಾಡಲು ಸರಿಯಾದ ವ್ಯವಸ್ಥೆ ಇರುವುದಿಲ್ಲ ಇದರಿಂದ ಸಾರ್ವಜನಿಕರು ತಮ್ಮ ವಾಹನಗಳನ್ನು ಎಲ್ಲಿ ಬೇಕಂದರಲ್ಲಿ ವಾಹನಗಳನ್ನು ನಿಲುಗಡೆ ಮಾಡಿ ಟ್ರಾಫಿಕ್ ಜಾಮ್ ಆಗುತ್ತಿದೆ.

ಅಲ್ಲದೆ ಹಳ್ಳಿಗಳಿಂದ ಬರುವಂತಹ ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಇರುವುದಿಲ್ಲ. ಪ್ರಮಾಣ ಪತ್ರಗಳನ್ನು ನಾಡಕಚೇರಿಯಿಂದಲೇ ವಿತರಣೆ ಮಾಡುವುದು ಮತ್ತು ಖಾಸಗಿ ವೆಬ್‌ಸೈಟನ್ನು ಆನ್‌ಲೈನ್‌ಗಳಲ್ಲಿ ನೀಡಿಲು ಅನುಕೂಲ ಮಾಡಿಕೊಟ್ಟಲ್ಲಿ ಹಳ್ಳಿಯಿಂದ ಬರುವ ಸಾರ್ವಜನಿಕರಿಗೆ ಅನುಕೂಲವಾಗುತ್ತದೆ. ಅಲ್ಲಿಂದ ಇಲ್ಲಿಂದ ಅಲೆದಾಡುವ ಪರಿಸ್ಥಿತಿ ತಪ್ಪುತ್ತದೆ. ಖಾಸಗಿ ಕಂಪ್ಯೂಟರ ಕೇಂದ್ರಗಳಲ್ಲಿ ಪ್ರಮಾಣ ಪತ್ರಗಳ ಪ್ರಿಂಟ್ ತೆಗೆದುಕೊಳ್ಳಲು ಅನುಕೂಲ ಮಾಡಿಕೊಡಬೇಕು ಈ ರೀತಿಯ ಪ್ರಮಾಣ ಪತ್ರಗಳ ಪ್ರಿಂಟ್ ಅಥವಾ ಪ್ರಮಾಣ ಪತ್ರಗಳನ್ನು ಅರ್ಜಿಸಲ್ಲಿಸಲು ವಿಳಂಬವಾಗುವದರಿಂದ ಈ ಕಛೇರಿಯ ಮುಂದೆ ದಲ್ಲಾಳಿಗಳ ಹಾವಳಿ ಹೆಚ್ಚಾಗಿರುತ್ತದೆ. ಆದ್ದರಿಂದ ಈ ಕಛೇರಿಯಲ್ಲಿ ಸಂಭಂಧಪಟ್ಟ ಅಧಿಕಾರಿಗಳಿಗೆ ಸರಿಯಾಗಿ ಕರ್ತವ್ಯ ನಿರ್ವಹಿಸಲು ಆದೇಶಿಸಿದಲ್ಲಿ ದಲ್ಲಾಳಿಗಳ ಹಾವಳಿಗೆ ಕಡಿವಾಣ ಹಾಕಬೇಕು ಎಂದು ದತ್ತು ಭಾಸಗಿ ಅವರು ಸಚಿವರಿಗೆ ಸಲ್ಲಿಸಿದ ಮನವಿಯಲ್ಲಿ ಆಗ್ರಹಿಸಿದ್ದಾರೆ. ಅವರೊಂದಿಗೆ ರಾಮಾ ಪೂಜಾರಿ, ಮುಲ್ಲಾ ಆಲಗೂಡ, ಹುಸೇನ, ಸಂಜೀವ ಮಾಳಗೆ, ನಂದಕುಮಾರ ಇದ್ದರು.

# ಬೆಲೆ ಏರಿಕೆ: ಜನಸಾಮಾನ್ಯರು ಹೈರಾಣ: ಹರ್ಷಾನಂದ ಗುತ್ತೇದಾರ ಆಕ್ರೋಶ



ಕಲಬುರಗಿ:-

ಕರ್ನಾಟಕ ರಾಜ್ಯ ಸರ್ಕಾರವು ಇಂಧನದ ಮೇಲೆ ತೆರಿಗೆಯನ್ನು ಏರಿಕೆ ಮಾಡಿದೆ ಇದ-ರಿಂದ ಪೆಟ್ರೋಲ್ 3 ರೂಪಾಯಿ ಹಾಗೂ ಡೀಸೆಲ್ 3.5 ರೂಪಾಯಿ ದುಬಾರಿಯಾಗಿದೆ ಅಲ್ಲದೇ ಇದರ ಪರಿಣಾಮ ಹಾಲಿನ ಮೇಲೂ ಆಗಿದ್ದು ಈಗ ಹಾಲಿನ ದರವನ್ನು 2 ರೂ. ಏರಿಸಿದ್ದಾರೆ ಎಂದು ಜಿ.ಪಂ ಮಾಜಿ ಉಪಾಧ್ಯಕ್ಷ ಹರ್ಷಾನಂದ ಗುತ್ತೇದಾರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಲೆ ಏರಿಕೆ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಸಿಎಂ ಸಿದ್ದರಾಮಯ್ಯ ನುಂಗಣ್ಣನಂತೆ ಎಲ್ಲವನ್ನೂ ನುಂಗುತ್ತಿದ್ದಾರೆ. ಅದರ ಜೊತೆಗೆ ತೈಲ ದರ ಏರಿಕೆ ಮಾಡಿ ಜನರನ್ನು ಲೂಟಿ ಮಾಡುತ್ತಿದ್ದಾರೆ. ಜನರು ದಂಗೆ ಎದ್ದು ಸರ್ಕಾರವನ್ನು ಕಿತ್ತುಹಾಕಬೇಕಿದೆ ಎಂದು ಅವರು ಕರೆ ನೀಡಿದ್ದಾರೆ.

ಪ್ರಾಥಮಿಕ ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ಆರಂಭಿಸಿ ಅಂಗನವಾಡಿಗಳನ್ನು ಶಾಶ್ವತವಾಗಿ ಮುಚ್ಚುವ ಹುನ್ನಾರ ಮಾಡಲಾಗುತ್ತಿದೆ ಅಲ್ಲದೇ ವಿಶೇಷವಾಗಿ ರಾಜ್ಯದ ಇತ-ರೆಡೆ ಹೊರತುಪಡಿಸಿ ಕೇವಲ ಕಲ್ಯಾಣ ಕರ್ನಾಟಕದಲ್ಲಿ ಮಾತ್ರ ಪ್ರಾಥಮಿಕ ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ಆರಂಭಿಸಲಾಗುತ್ತಿದೆ ಇದು ಏನನ್ನು ಸೂಚಿಸುತ್ತದೆ ಎಂದು ಪ್ರಶ್ನಿಸಿದ್ದಾರೆ.

ಆಳಂದ ಶಾಸಕ ಬಿ ಆರ್ ಪಾಟೀಲ ಅಂಗನವಾಡಿ ಮತ್ತು ಅಂಗನವಾಡಿ ಕಾರ್ಯಕರ್ತೆಯರ ಬಗ್ಗೆ ಕೇವಲ ಮೊಸಳೆ ಕಣ್ಣೀರು ಸುರಿಸುತ್ತಿದ್ದಾರೆ ಈಗ ಇದರ ಬಗ್ಗೆ ಏನೂ ಹೇಳುತ್ತಾರೆ ಎಂದು ಸವಾಲು ಹಾಕಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಎರಡು ನಾಲಿಗೆ ಇದೆ. ಬಿಜೆಪಿ ಸರ್ಕಾರ ಪೆಟ್ರೋಲ್ ದರ ಏರಿಸಿದ್ದಕ್ಕೆ ಮಾನ ಮರ್ಯಾದೆ ಇದೆಯೇ ಎಂದು ಪ್ರಶ್ನೆ ಮಾಡಿದ್ದರು. ಈಗ ಮೂರು ರೂಪಾಯಿ ಹೆಚ್ಚು ಮಾಡಿದ ಕಾಂಗ್ರೆಸ್ ನಾಯಕರಿಗೆ ಮಾನ ಮರ್ಯಾದೆ ಇಲ್ಲ. ಈಗ ಸಿದ್ದರಾಮಯ್ಯ ಎಂದರೆ ನುಂಗಣ್ಣ ಎಂದು ವ್ಯಂಗ್ಯವಾಡಿದ್ದಾರೆ. ತೈಲ ಬೆಲೆ ಏರಿಯಾದರೆ ಸಿಮೆಂಟ್, ತರಕಾರಿ ಎಲ್ಲ ಬೆಲೆಯೂ ಏರಲಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದರು. ಈಗ ಯಾವ ಬೆಲೆಗಳು ಹೆಚ್ಚಲಿದೆ ಎಂದು ತಿಳಿಸಲಿ. ಗ್ಯಾರಂಟಿ ಯೋಜನೆಗಳೆಂದು ಹೇಳಿ ಎಲ್ಲರಿಗೂ ಒಂದು ಲಕ್ಷ, ಎರಡು ಸಾವಿರ ಕೋಡುತ್ತೇವೆ ಎಂದರು. ರಾಹುಲ್ ಗಾಂಧಿ ಇನ್ನೂ ಮುಂದೆ ಹೋಗಿ ಟಕಾಟಕ್ ಎಂದು ಹಾಕುತ್ತೇನೆ ಎಂದಿದ್ದರು. ಆದರೆ ಟಕಾಟಕ್ ಎಂದು ಜೇಬಿಗೆ ಕತ್ತರಿ ಹಾಕಿದ್ದಾರೆ ಎಂದು ಲೇವಡಿ ಮಾಡಿದ್ದಾರೆ.

ಕಾಂಗ್ರೆಸ್ ಸರ್ಕಾರ ಗ್ಯಾರಂಟಿಗೆ 55,000 ಕೋಟಿ ರೂ. ಮೀಸಲಿಟ್ಟಿದೆ ಎಂದು ಹೇಳಲಾಗಿದೆ. ಇವರು ನಮ್ಮದೇ ಹಣವನ್ನು ದರೋಡೆ ಮಾಡಿ ನಮಗೆ ಮರಳಿ ನೀಡುತ್ತಿದ್ದಾರೆ. ಒಂದು ವರ್ಷವಾದರೂ ಅಭಿವೃದ್ಧಿ ಕಾರ್ಯ ನಡೆದಿಲ್ಲ, ಶಿಕ್ಷಕರಿಗೆ ಸಂಬಳ ನೀಡಿಲ್ಲ ಎಂದು ಆರೋಪಿಸಿದ್ದಾರೆ.

ದಲಿತರ 187 ಕೋಟಿ ರೂಪಾಯಿ ನುಂಗಿ ಸಚಿವ ಬಿ.ನಾಗೇಂದ್ರ ಔಟ್ ಆಗಿದ್ದಾರೆ. ಇನ್ನು ಎರಡನೇ ವಿಕೆಟ್ ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕಿದೆ. ಸಚಿವ ನಾಗೇಂದ್ರ 20 ಪರ್ಸೆಂಟ್ ಜೇನು ಕಿತ್ತಿದ್ದು ಮಾತ್ರ, ಆದರೆ 80 ಪರ್ಸೆಂಟ್ ಜೇನನ್ನು ಸಿಎಂ ಸಿದ್ದರಾಮಯ್ಯ ಹೊಡೆದಿದ್ದಾರೆ. ಈ ಹಣ ತೆಲಂಗಾಣಕ್ಕೆ ಹೋಗಿ, ಬಳಿಕ ಬಾರ್‌ಗಳಿಗೆ ಹೋಗಿದೆ. ದಲಿತರ ಉದ್ಯಮಗಳಿಗೆ, ಅಂಗಡಿಗಳಿಗೆ, ಅವರ ಮಕ್ಕಳ ಸ್ಕಾಲರ್ ಶಿಪ್‌ಗೆ ಈ ಹಣ ಕೊಡಬೇಕಿತ್ತು. ಚೆನಲ್ಲೇ ಹಗಲು ದರೋಡೆ ಮಾಡಿದ್ದಾರೆ. ಇದ-ರಿಂದಾಗಿ ನಿ ಷ್ಠಾ ವಂತ ಅಧಿಕಾರಿ ಸತ್ತಿದ್ದಾರೆ ಎಂದು ಆಕ್ರೋಶ ಹೊರಹಾಕಿದರು. ಜನರು ಕಲುಷಿತ ನೀರು ಕುಡಿದು ಸಾಯುತ್ತಿದ್ದರೂ ಕುಟುಂಬಕ್ಕೆ ಪರಿಹಾರ ನೀಡಲು ಸರ್ಕಾರದ ಬಳಿ ಹಣವಿಲ್ಲ. ಸರ್ಕಾರಿ ಆಸ್ಪತ್ರೆಗೆ ಔಷಧಿ ಖರೀದಿಗೆ, ಶಾಲೆಗೆ ಪುಸ್ತಕ ಕೊಡಲು ಹಣವಿಲ್ಲ. ಇದಕ್ಕಾಗಿಯೇ ತೈಲ ಬೆಲೆ ಏರಿಕೆ ಮಾಡಿ ಹಣ ಲೂಟಿ ಮಾಡಲಾಗುತ್ತಿದೆ ಎಂದು ದೂರಿದ್ದಾರೆ.

ಸರ್ಕಾರದ ಬಂಡವಾಳ ಬಯಲು ಮಾಡುತ್ತೇವೆ ಕಾಂಗ್ರೆಸ್ ಸರ್ಕಾರದ ದುರಾಡಳಿತದ ವಿರುದ್ಧ ಹಾಗೂ ಸರ್ಕಾರದ ಬಂಡವಾಳ ಬಯಲು ಮಾಡಲು ಬಿಜೆಪಿ ಇನ್ನಷ್ಟು ಹೋರಾಟ ಮಾಡಲಿದೆ. ಸಿಎಂ ಸಿದ್ದರಾಮಯ್ಯ ರಾಜ್ಯದ ಆರ್ಥಿಕತೆಯನ್ನು ದಿವಾಳಿಯಾಗಿಸಿದ್ದಾರೆ. ಎಲ್ಲರೂ ದಂಗೆ ಎದ್ದು ಈ ಸರ್ಕಾರವನ್ನು ಕಿತ್ತು ಹಾಕಬೇಕಿದೆ ಎಂದು ಕರೆ ನೀಡಿದ್ದಾರೆ.

# ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಬೃಹತ್ ಪ್ರತಿಭಟನೆ




ತಾಳಿಕೋಟೆ:-

ರಾಜ್ಯ ಸರ್ಕಾರವು ಜನ ಸಾಮಾನ್ಯರ ಹೊಟ್ಟೆಯ ಮೇಲೆ ಹೊಡೆಯುವದರೊಂದಿಗೆ ದಿನಬಳಿಕೆ ವಸ್ತುಗಳಾದ ಪೇಟ್ರೋಲ್, ಡಿಸೇಲ್, ಅಲ್ಲದೇ ಹಾಲಿನ ದರದ ಜೊತೆಗೆ ಎಲ್ಲ ವಸ್ತುಗಳ ಬೆಲೆಯ ಮೇಲೆ ತೆರಿಗೆಯನ್ನು ಹೆಚ್ಚಿಸಿರುವದನ್ನು ಖಂಡಿಸಿ ತಾಳಿಕೋಟೆಯ ಭಾರತೀಯ ಜನತಾ ಪಕ್ಷದ ನಗರ ಘಟಕದ ನೇತೃತ್ವದಲ್ಲಿ ಪಟ್ಟಣದಲ್ಲಿ ಬುಧವಾರರಂದು ಬೃಹತ್ ಪ್ರತಿಭಟನೆ ನಡೆಸಿ ರಾಜ್ಯ ಸರ್ಕಾರದ ವಿರೂದ್ದ ಆಕ್ರೋಶ ಹೊರ ಹಾಕಿದರು. ಪಟ್ಟಣದ ಶ್ರೀ ಬಸವೇಶ್ವರ ವೃತ್ತದಲ್ಲಿ ಜಮಾವಣೆಗೊಂಡ ಬಿಜೆಪಿ ಕಾರ್ಯಕರ್ತರು ದಿನಬಳಿಕೆ ವಸ್ತುಗಳ ಬೆಲೆ ರಾಜ್ಯ ಸರ್ಕಾರವು ಹೆಚ್ಚಿಸುತ್ತಾ ಸಾಗಿದೆ ಬಡಬಗ್ಗರು ಜೀವನ ನಡೆಸುವದೇ ದುಸ್ಥರವೆಂಬಂತಾಗಿದೆ ಸಿದ್ದರಾ ಮಯ್ಯನವರ ನೇತೃತ್ವದ ಕಾಂಗ್ರೇಸ್ ಸರ್ಕಾರವು ಅಧಿಕಾರಕ್ಕೆ ಬಂದ ಒಂದೇ ವರ್ಷದಲ್ಲಿ ಪೇಟ್ರೋಲ್, ಡಿಸೇಲ್ ಬೆಲೆಯನ್ನು ಎರಡುಭಾರಿ ಎಚ್ಚಿಸಿದೆ ಮತ್ತು ಕಳೆದ ಹಾಲಿನ ದರ ಹೆಚ್ಚಿಸಿ ರೈತರಿಗೆ ಪ್ರೋತ್ಸಾಹದ ಹೆಚ್ಚಿಸುತ್ತೇವೆಂದು ಹೇಳಿ ಕಳೆದ 3 ತಿಂಗಳ ಹಿಂದೆ ಬೆಲೆ ಏರಿಸಿದ್ದಾರೆ ಮತ್ತೇ ಈಗ ಹಾಲಿನ ದರವನ್ನು ಹೆಚ್ಚಿಸಿ ಗ್ಯಾರೆಂಟಿ ಹೊಟ್ಟೆ ತುಂಬಿಸಿಕೊಳ್ಳಲು ಮುಂದಾಗಿದ್ದಾರೆಂದು ಆರೋಪಿಸಿದ ಅವರು ರಾಜ್ಯ ಸರ್ಕಾರದಿಂದ 5 ಗ್ಯಾರೆಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ ಮಹಿಳೆಯರಿಗೆ ಒಂದು ಕಡೆ ಕೊಟ್ಟಂತೆ ಮಾಡಿ ಪುರುಷರಿಂದ ಇನ್ನೊಂದು ಕೈಯಿಂದ ಕಸಿದುಕೊಳ್ಳುವಂತಹ ಕಾರ್ಯ ನಡೆಸಿದ್ದಾರೆ. ಮನೆಗಳಿಗೆ ವಿದ್ಯುತ್ ಉಚಿತವಾಗಿ ನೀಡುತ್ತಿದ್ದೇವೆಂದು ಹೇಳುವ ಮುಖ್ಯಮಂತ್ರಿಗಳು ವಿದ್ಯುತ್ ದರವನ್ನು ಹೆಚ್ಚಿಸಿ ಮತ್ತೊಂದು ಕಡೆಯಿಂದ ಜನರಿಂದ ವಸೂಲಿಗೆ ಇಳಿದಿದೆ ತಾಳ ಮೇಳ ವಿಲ್ಲದ ರಾಜ್ಯ ಕಾಂಗ್ರೇಸ್ ಸರ್ಕಾರವು ಬಡ ಬಗ್ಗರ ಸರ್ಕಾರವಾಗದೇ ಬಡವರಿಂದ ಕಿತ್ತೂ ತಿನ್ನುವ ಸರ್ಕಾರವಾಗಿದೆ ಎಂದು ಆರೋಪಿಸಿದ ಅವರು ಕೂಡಲೇ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬಡ ಬಗ್ಗರ ದಿನಬಳಿಕೆ ವಸ್ತುಗಳ ಬೆಲೆ ಹೆಚ್ಚಿಸಿರುವದನ್ನು ಇಳಿಸಬೇಕು ಇಲ್ಲದಿದ್ದರೆ ಬಿಜೆಪಿ ನೇತೃತ್ವದಲ್ಲಿ ನಿರಂತರ ಪ್ರತಿಭಟನೆ ರಾಜ್ಯದಲ್ಲಿ ನಡೆಯಲಿದೆ ಎಂದು ಎಚ್ಚರಿಸಿದರು. ಪ್ರತಿಭಟನಾ ಸಮಯದಲ್ಲಿ ಕಾರ್ಯಕರ್ತರು ಟೈಯಗೆ ಬೆಂಕಿ ಹಚ್ಚಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರ ಭಾವಚಿತ್ರವನ್ನು ದಹಿಸಿ, ಗಂಟೆಕಾಲ ರಸ್ತೆ ತಡೆ ನಡೆಸಿ ಆಕ್ರೋಶ ಹೊರಹಾಕಿದರು. ಈ ಪ್ರತಿಭಟನಾ ನೇತೃತ್ವವನ್ನು ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾ ಉಪಾಧ್ಯಕ್ಷೆ ಸುವರ್ಣಾ ಬಿರಾದಾರ, ಶಶಿಧರ ಡಿಸಲೆ, ಮಂಜು ಶೆಟ್ಟಿ, ಪ್ರಕಾಶ ಹಜೇರಿ, ಮಾನಸಿಂಗ್ ಕೊಕಟನೂರ, ಶರಣಗೌಡ ಗೊಟಗುಣಕಿ, ದ್ಯಾಮನಗೌಡ ಪಾಟೀಲ, ಸಂತೋಷ ಹಜೇರಿ, ಮಹಾಂತೇಶ ಮುರಾಳ, ಕಿರಣ ಬಡಿಗೇರ, ನಾಗರಾಜ ಬಳಿಗಾರ, ಮುದಕಪ್ಪ ಬಡಿಗೇರ, ಜಯಸಿಂಗ್ ಮೂಲಿಮನಿ, ಶಂಕರಯ್ಯ ಹಿರೇಮಠ, ರವಿ ಕಟ್ಟಿಮನಿ, ವಾಸುದೇವ ಹೆಬಸೂರ, ವಿಠ್ಠಲ ಮೋಹಿತೆ, ಪ್ರಕಾಶ ಪಾಟೀಲ, ರಾಘು ಮಾನೆ, ಮೊದಲಾದವರು ವಹಿಸಿದ್ದರು.




# ಕಿವಿನೋವಿಗೆ ಮನೆಮದ್ದು



1. ಹಸಿಈರುಳ್ಳಿ ರಸವನ್ನು ನೋವಿರುವ ಕಿವಿಗೆ 2 2 ಹನಿ ಹಾಕುವುದರಿಂದ ಕಿವಿನೋವು ಕಡಿಮೆ ಆಗುತ್ತದೆ. ಕಿವಿ ಸೋರುತ್ತಿದ್ದರೆ ಅದೂ ಕಡಿಮೆ ಆಗುತ್ತದೆ.
2. ಎಳ್ಳೆಣ್ಣೆಗೆ ನಿಂಬೆರಸ ಹಾಕಿ ಬಿಸಿಮಾಡಿ 2 – 2 ಹನಿ ಕಿವಿಗೆ ಹಾಕಿದರೆ ಕಿವಿನೋವು ಕಡಿಮೆ ಆಗುತ್ತದೆ.
3. ಮೂಲಂಗಿಯನ್ನು ಬೆಂಬೂದಿಯಲ್ಲಿಟ್ಟು ನಂತರ ಅದನ್ನು ಜಜ್ಜಿ ರಸ ತೆಗೆದು 2 – 2 ಹನಿ ಹಾಕಿ ಕಿವಿಯಲ್ಲಿ ಸೋರುವುದು ಕಡಿಮೆ ಆಗುತ್ತದೆ.
4. ಏಲಕ್ಕಿ ಎಣ್ಣೆಯನ್ನು ಕಿವಿಗೆ 2 – 2 ಹನಿ ಹಾಕಿದರೆ ಕಿವಿನೋವು ಕಡಿಮೆ ಆಗುತ್ತದೆ.
5. ಅಮೃತಬಳ್ಳಿಯ ಬೇರನ್ನು ಅರೆದು ರಸ ತೆಗೆದು ಆ ರಸವನ್ನು ಎಳ್ಳೆಣ್ಣೆಯಲ್ಲಿ ಹಾಕಿ ಕುದಿಸಿ, ಆರಿಸಿ 2 – 2 ಹನಿಯಷ್ಟು ಹಾಕುತ್ತಾ ಬಂದರೆ, (3 ದಿನ) ಕಿವಿನೋವು ಶಮನವಾಗುತ್ತದೆ.
6. ಒಂದು ಲವಂಗವನ್ನು ಜಜ್ಜಿ ಎಳ್ಳೆಣ್ಣೆಯಲ್ಲಿ ಹಾಕಿ ಕುದಿಸಿ, ಶೋಧಿಸಿ, ಆರಿಸಿ 2 – 2 ಹನಿ ಕಿವಿಗೆ ಹಾಕುವುದರಿಂದ ಕಿವಿನೋವು, ಕಿವಿ ಸಿಡಿತ ಕಡಿಮೆ ಆಗುತ್ತದೆ.
7. ಈರುಳ್ಳಿ ರಸವನ್ನು ಬಿಸಿಮಾಡಿ ಕಿವಿಗೆ ಹಾಕುವುದರಿಂದ ಕಿವಿನೋವು ಗುಣವಾಗುತ್ತದೆ.
8. ನಿಂಬೆರಸವನ್ನು ಸಮಪ್ರಮಾಣ ಬಿಸಿನೀರಿನೊಂದಿಗೆ ಬೆರೆಸಿ ಕಿವಿಗೆ ಹಾಕುತ್ತಾ ಬಂದರೆ ಕಿವಿನೋವು ಕಡಿಮೆ ಆಗುತ್ತದೆ.
9. ಕಿವುಡುತನ: ಮೊಲದ ಹಿಕ್ಕೆಯನ್ನು ಎಣ್ಣೆಯಲ್ಲಿ ಹಾಕಿ ಕಾಯಿಸಿ ಕಿವಿಗೆ ಹಾಕುವುದರಿಂದ ಕಿವುಡುತನ (ಮಧ್ಯದಲ್ಲಿ ಬಂದಿರುವ) ನಿವಾರಣೆಯಾಗುತ್ತದೆ.
10. ಬಿಲ್ವಮರದ ತಿರುಳು, ಕುರಿ ಹಾಲನ್ನು ಎಳ್ಳೆಣ್ಣೆಗೆ ಸೇರಿಸಿ ಚೆನ್ನಾಗಿ ಕುದಿಸಿ ತೇವಾಂಶಪೂರ್ಣವಾಗಿ ಹೋದಮೇಲೆ ಶೋಧಿಸಿ, ಆರಿಸಿ 8 ದಿನಗಳ ಕಾಲ 2 – 2 ಹನಿ ಹಾಕುತ್ತಾ ಬಂದರೆ ಕಿವುಡುತನ ನಿವಾರಣೆಯಾಗುತ್ತದೆ.
11. ಕುರಿಯ ಹಾಲಿನಿಂದ ತಯಾರಿಸಿ ತುಪ್ಪದಲ್ಲಿ ಇಂಗನ್ನು ಹಾಕಿ ಚೆನ್ನಾಗಿ ಕಾಯಿಸಿ, ಆರಿಸಿ, ಶೋಧಿಸಿ ಕಿವಿಗೆ 2 –2 ಹನಿ ಹಾಕುತ್ತಾ ಬಂದರೆ ಕಿವುಡುತನ ಕಡಿಮೆಯಾಗುತ್ತದೆ.
12. ಕಿವಿಯಿಂದ ಸೋರುವಿಕೆ : ಹಾಗಲಹೂವಿನ ರಸವನ್ನು ಕಿವಿಗೆ ಹಾಕುತ್ತಾ ಬಂದರೆ ಕಿವಿಯಿಂದ ಸೋರುವಿಕೆ ನಿವಾರಣೆಯಾಗುತ್ತದೆ.
13. ಕಿರುಕಸಾಲೆ ಸೊಪ್ಪಿನ ರಸವನ್ನು ತೆಗೆದು ಸಮಪ್ರಮಾಣ ಕೊಬ್ಬರಿಎಣ್ಣೆಯಲ್ಲಿ ಹಾಕಿ ಚೆನ್ನಾಗಿ ಕುದಿಸಿ, ನೀರಿನ ಅಂಶ ಹೋದನಂತರ ಶೋಧಿಸಿ, ಆರಿಸಿ, 2 – 2 ಹನಿ ಹಾಕುತ್ತಾ ಬಂದರೆ ಕಿವಿ ಸೋರುವುದು ನಿಲ್ಲುತ್ತದೆ.

1. ಗೌರಮ್ಮನ ಆರೋಗ್ಯ ಸೂತ್ರಗಳು ಪ್ರಿಸ್ಮ್ ಬುಕ್ಸ್ ಪ್ರೈವೇಟ್ ಲಿಮಿಟೆಡ್ ವತಿಯಿಂದ ಪ್ರಕಟಣೆ
2. ಡಾ. ಗೌರಿ ಸುಬ್ರಮಣ್ಯ ಆಯುರ್ವೇದ ತಜ್ಞರು ಮತ್ತು ಧರ್ಮದರ್ಶಿಗಳು ಮುಕ್ತಿನಾಗ ದೇವಸ್ಥಾನ ಫೋನ್ ನಂ. 9535383921

# ಬಳ್ಳಾರಿ ಲಾರೀ ಮಾಲೀಕರ ಸಂಘದಲ್ಲಿಹೊಸ ರಾಜಕೀಯ ಶುರು

ಬಳ್ಳಾರಿ:-

ಸಧ್ಯ ನಿಷ್ಕ್ರಿಯವಾಗಿರುವ ಬಳ್ಳಾರಿ ಜಿಲ್ಲಾ ಲಾರಿ ಮಾಲೀಕರ ಸಂಘದಲ್ಲಿ ಹೊಸ ರಾಜಕೀಯ ಆರಂಭವಾಗಿದೆ. ಪಾಲಿಕೆ ಸದಸ್ಯ ಶ್ರೀನಿವಾಸುಲು ಮಿಂಚು ಅವರು ನೂತನ ಅಧ್ಯಕ್ಷ ರಾಗುವ ಎಲ್ಲಾ ಸಾಧ್ಯತೆಗಳು ನಗರ ಶಾಸಕರ ಆಶಯದಂತೆ ನಡೆದಿದೆಂದು ಹೇಳಲಾಗುತ್ತಿದೆ. ನಿನ್ನೆ ದಿನ ಸಂಘದ ಕಚೇರಿಯಲ್ಲಿ ಸಭೆ ನಡೆಯಿತು. ಹಾಲಿ ಅಧ್ಯಕ್ಷರಾಗಿದ್ದ ಪೆದ್ದನ್ನ ತಮ್ಮ ವಯಕ್ತಿಕ ಕಾರಣದಿಂದ ರಾಜೀನಾಮೆ ಸಲ್ಲಿಸಿದ್ದರು.

ಹಂಗಾಮಿ ಅಧ್ಯಕ್ಷರನ್ನಾಗಿ ಎಂ.ವಿಶ್ವನಾಥಸ್ವಾಮಿ ಅವರನ್ನು ನೇಮಕ ಮಾಡಿಕೊಂಡು. ಹೊಸ ಅಧ್ಯಕ್ಷರ ಆಯ್ಕೆಗೆ ಚುನಾವಣೆ ನಡೆಸಬೇಕೆಂಬ ಚರ್ಚೆ ನಡೆಯುವಾಗ.ಪಾಲಿಕೆ ಸದಸ್ಯರುಗಳಾದ ಎಂ.ಪ್ರಭಂಜನ್ ಕುಮಾರ, ಮುಂಚು ಶ್ರೀನಿವಾಸಲು, ಕಾಂಗ್ರೆಸ್ ಮುಖಂಡ ಬಿ.ಆರ್.ಎಲ್.ಶೀನ ಅವರುಗಳು ಆಗಮಿಸಿ. ನಗರ ಶಾಸಕರು ಹೇಳಿದ್ದಾರೆ.

ನಿಮ್ಮ ಅಸೋಸಿಯೇಷನ್ ಸಮಸ್ಯೆ ಏನಿದೆಂದು ತಿಳಿದುಕೊಳ್ಳಲು ಅದಕ್ಕಾಗಿಬಂದಿದೆಂದು ನಂತರ ನೀವೆಲ್ಲ ಸರ್ವ ಸಮ್ಮತದಿಂದ ಒಪ್ಪುವುದಾದರೆ ಮಿಂಚು ಶ್ರೀನಿವಾಸ್ ಅವರನ್ನು ಅಧ್ಯಕ್ಷರನ್ನಾಗಿ ಮಾಡಿ, ಸಂಘವನ್ನು ಕ್ರಿಯಾತ್ಮಕವಾಗಿ ಮಾಡಿ ಲಾರಿ ಮಾಲೀಕರ ಸಮಸ್ಯೆಗಳಿಗೆ ಸ್ಪಂದಿಸಲಿದೆಂಬ ಪ್ರಸ್ತಾವನೆ ಇಡಲಾಯಿತಂತೆ. ಅಲ್ಲದೆ ಈ ಕುರಿತು ನಗರ ಶಾಸಕರ ಬಳಿಬಂದು ಚರ್ಚಿಸಿ ಒಂದು ಒಮ್ಮತದ ನಿರ್ಣಯ ಪಡೆಯಲು ಸಹ ಮಾತುಕತೆ ನಡೆಯಿತಂತೆ. ಆಗ ಸಭೆಯಲ್ಲಿದ್ದ ಸದಸ್ಯರು ಕೆಲ ಪದಾಧಿಕಾರಿಗಳು ಶಾಸಕರ ಬಳಿ ಚರ್ಚಿಸಲು ಸಮ್ಮತಿಸಿದರಂತೆ.

ಆದರೆ ನಂತರ ಈ ರಾಜಕೀಯ ವ್ಯಕ್ತಿಗಳು ನಮ್ಮ ಸಂಘಕ್ಕೆ ಬೇಡ ನಮ್ಮಲ್ಲಿಯೇ ಚುನಾವಣೆ ನಡೆಸಿ ಆಗೋಣ ಎಂಬ ಚರ್ಚೆ ಯೂ ನಡೆಯಿತಂತೆ.

ಈಮಧ್ಯೆ ಸಹಕಾರ ಸಂಘಗಳ ಉಪ ನಿಬಂಧಕರ ಕಚೇರಿಯಲ್ಲಿ ಸಂಘದ ನೂತನ ಅಧ್ಯಕ್ಷರನ್ನಾಗಿ ಮುಂಚು ಶ್ರೀನಿವಾಸ್ ಅವರು ಸೇರಿದಂತೆ ಇನ್ನಿತರ ಪದಾಧಿಕಾರಿಗಳ ಆಯ್ಕೆ ಯಾದಂತೆ ದಾಖಲೆಗಳನ್ನು ನೀಡಿದೆ.

ಈ ಬಗ್ಗೆ ಚರ್ಚಿಸಲು ಜೂನ್ 29 ರಂದು ದಾಖಲೆ ಸಮೇತ ಬರಲು ಹಾಲಿ ಕಾರ್ಯದರ್ಶಿ ಬಸವರಾಜ್ ಅವರಿಗೆ ಉಪ ನಿಂಭಂದಕರ ಕಚೇರಿಯಿಂದ ಪತ್ರ ಬಂದಿದೆಯಂತೆ.

## ಒಂದನೇ ಪುಟದಿಂದ

# ಅಭಿವೃದ್ಧಿ ಕಾರ್ಯದಲ್ಲಿ ರಾಜಕೀಯ ಇಲ್ಲ: ಸಿಎಂ

ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.

ಮೇಕೆದಾಟು ಯೋಜನೆಗೆ ನಾವು ಡಿಪಿಆರ್ ಮಾಡಿ ಕೇಂದ್ರ ಹಾಗೂ ಕೇಂದ್ರ ಜಲಾ ಆಯೋಗಕ್ಕೆ ಸಲ್ಲಿಸಿದ್ದೇವೆ. ಈ ವಿಚಾರ ನ್ಯಾಯಾಲಯದ ಮುಂದೆ ಇದೆ. ನನಗೆ ಗೊತ್ತಿರುವಂತೆ ಮೇಕೆದಾಟು ಯೋಜನೆ ಮಾಡಲು ಯಾವುದೇ ತಕರಾರು ಇಲ್ಲ. ಇದರಿಂದ ತಮಿಳುನಾಡು, ಕರ್ನಾಟಕ ಇಬ್ಬರಿಗೂ ಅನೂಕೂಲವಾಗುತ್ತದೆ ಎಂದರು.

ಮೇಕೆದಾಟು ಯೋಜನೆಗೆ ನ್ಯಾಯಾಲಯದಲ್ಲಿ ಯಾವುದೇ ತಡೆಯಾಜ್ಞೆ ಇಲ್ಲ. ಇದು ಕುಡಿಯುವ ನೀರು ಮತ್ತು ವಿದ್ಯುತ್ ತಯಾರಿಸುವ ಉದ್ದೇಶ ಹೊಂದಿದೆ ಎಂದು ಹೇಳಿದರು.2010 ರಲ್ಲಿ ಕೃಷ್ಣ ಮೇಲ್ದಂಡೆ ಯೋಜನೆ ಗೆಜೆಟ್ ನೋಟಿಫಿಕೇಶನ್ ಆಗಿಲ್ಲ. ಗೆಜ-'ಟ್ ಮಾಡಲು ಕೇಂದ್ರದ ಮೇಲೆ ಒತ್ತಡ ಹಾಕಿ ಎಂದು ಸಂಸದರಿಗೆ ಹೇಳಿದ್ದೇನೆ ಎಂದರು. ಕೇಂದ್ರ ಹಣಕಾಸು ಆಯೋಗ ರಚನೆ ವೇಳೆ ರಾಜ್ಯದ ವಿಸ್ತರಣೆ, ಭೌಗೋಳಿಕ ಪ್ರದೇಶ ಇವೆಲ್ಲ ಮಾನದಂಡ ಇತ್ತು. 15ನೇ ಹಣಕಾಸು ಆಯೋಗ ಕರ್ನಾಟಕದಲ್ಲಿ 1971ರ ಜನಗಣತಿ ತೆ-ಗೆದುಕೊಂಡಿದೆ. ನಾವು ಜನಸಂಖ್ಯೆಗನುಗುಣವಾಗಿ ಕಟ್ಟುನಿಟ್ಟಾಗಿ ನಿಯಂತ್ರಣ ಮಾಡಿದ್ದೇವೆ. ಉತ್ತರ ಭಾರತದಲ್ಲಿ ಆಗಿಲ್ಲ. ಮಾನದಂಡವನ್ನು ಸರಿಪಡಿಸಬೇಕು. ಯಡಿಯೂರಪ್ಪ, ಬೊಮ್ಮಾಯಿ ಮುಖ್ಯಮಂತ್ರಿಯಾಗಿದ್ದಾಗ ಕೂಡಾ ಪತ್ರ ಬರೆದು ಒತ್ತಾಯ ಮಾಡಿದ್ದಾರೆ ಎಂದರು.

ಮೆಟ್ರೋ ಯೋಜನೆಗೆ 15,611 ಕೋಟಿ ರೂ. ನೀಡಲು ಒತ್ತಾಯ ಮಾಡಿದ್ದೇವೆ. ರಾಯಚೂರಿನಲ್ಲಿ ಏಮ್ಸ್‌ಗೆ ಆಗ್ರಹ ಮಾಡಿದ್ದೇವೆ. ರಾಜಸ್ತಾನ ಬಿಟ್ಟರೆ ಕರ್ನಾಟಕ ಹೆಚ್ಚು ಬರಗಾಲಕ್ಕೆ ತುತ್ತಾಗುತ್ತದೆ. ಹಾಗಾಗಿ ಎನ್‌ಡಿಆರ್ ಎಫ್‌ನಲ್ಲಿ ಹೆಚ್ಚು ಹಣ ನೀಡಿ ಎಂದು ಕೇಳಿದ್ದೇವೆ ಎಂದರು

ಪಶ್ಚಿಮಘಟ್ಟಗಳಿಗೆ ಸಂಬಂಧಿಸಿದಂತೆ ಕಸ್ತೂರಿರಂಗನ್ ವರದಿ ತಿರಸ್ಕಾರ ಮಾಡಿ ಎಂದು ಹೇಳಿದೆ. ಜತೆಗೆ ಹಾಸನ ಅಥವಾ ಮೈಸೂರಿಗೆ 2ನೇ ಐಐಟಿ ಬೇಡಿಕೆ ಇಟ್ಟಿದ್ದೇನೆ. ರೈಲ್ವೆ ಯೋಜನೆ ಬಗ್ಗೆ ಪ್ರಸ್ತಾಪಿಸಿ ಬಾಕಿ ಉಳಿದ ಯೋಜನೆಗಳಿಗೆ ಚಾಲನೆ ನೀಡಿ ಎಂದು ಕೇಳಿದ್ದೇವೆ. ಗ್ರಾಮ ಸಡಕ್ ಯೋಜನೆ ಜಾರಿಗೂ ಒತ್ತಾಯಿಸಿದ್ದು, ಇಂದು ಕೇಂದ್ರ ಸಚಿವ ಗಡ್ಕರಿ ಅವರನ್ನು ಬೇಟಿ ಮಾಡಿ ಗಮನಕ್ಕೆ ತರುತ್ತೇನೆ ಎಂದರು.

ಮಂಗಳೂರು ಬಂದರು ನವೀಕರಣಕ್ಕೂ ಒತ್ತಾಯಿಸಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಹೊಸದಾಗಿ ಮೀನುಗಾರಿಕೆಗಾಗಿ ಬಂದರು ಮಾಡಲೂ ಆಗ್ರಹ ಮಾಡಲಾಗಿದೆ ಎಂದು ಅವರು ಹೇಳಿದರು. ಇಂದು ಪ್ರಧಾನಿ ಮೋದಿ ಅವರನ್ನು ಭೇಟಿಯಾದಾಗಲೂ ಈ ಎಲ್ಲ ವಿಚಾರಗಳನ್ನು ಮತ್ತೆ ಹೇಳುತ್ತೇನೆ.

ದೇವದಾರು ಗಣಿಗೆ ಅರಣ್ಯ ಇಲಾಖೆ ಬೇಡ ಎಂದು ಹೇಳಿದೆ. ಈ ಸಂಬಂಧ ಅರಣ್ಯ ಇಲಾಖೆ ಸಭೆ ಮಾಡಿ ತೀರ್ಮಾನಿಸಿದೆ ಎಂದು ಅವರು ಹೇಳಿದರು.

ಪೆಟ್ರೋಲ್- ಡಿಸೇಲ್ ಅಬಕಾರಿ ಸುಂಕ ಹೆಚ್ಚು ಮಾಡಿದ್ದು ಯಾರು, ಬಿಜೆಪಿಯವರ ಬೆಲೆ ಏರಿಕೆಗೆ ಸಂಬಪಂಧಿಸಿದಂತೆ ಮುಖ್ಯಮಂತ್ರಿಗಳು ಪ್ರತಿಕ್ರಿಯಿಸಿದರು.

ಸಂಬಂಧಿಸಿದಂತೆ ಬೆಲೆ ಏರಿಕೆಯನ್ನು ಮಾಡಿದ್ದು ಯಾರು, ಪೆಟ್ರೋಲ್ ಡಿಸೇಲ್ ಅಬಕಾರಿ ಸುಂಕ ಹೆಚ್ಚು ಯಾರ ಬೆಲೆ ಏರಿಕೆಗೆ ಸಂಬಂಧಿಸಿದಂತೆ ಪ್ರತಿಕ್ರಿಯ ಹಾಲಿನ ದರ ಏರಿಕೆ ಮಾಡಿಲ್ಲ. 9 ಲಕ್ಷ ಹೆಚ್ಚುವರಿ ಹಾಲು ಮಾರಾಟ ಮಾಡಬೇಕಲ್ಲ ಹಾಗಾಗಿ ಪ್ರಮಾಣ ಹೆಚ್ಚು ಮಾಡಿ ಅದಕ್ಕೆ ದರ ನಿಗದಿ ಮಾಡಿದ್ದೇವೆ. ಬಿಜೆಪಿಯವರು ಇದನ್ನು ಬೆಲೆ ಏರಿಕೆ ಎಂದರ ಹೇಗೆ ಎಂದು ಪ್ರಶ್ನಿಸಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ತನಿಖೆ ನಡೆಯುತ್ತಿದೆ. ಸಿಬಿಐ ಕೂಡಾ ತನಿಖೆ ಮಾಡುತ್ತಿದೆ. ಬಿಜೆಪಿಯವರು ಅಧಿಕಾರದಲ್ಲಿದ್ದಾಗ ಯಾವ ಕೇಸನ್ನೂ ಸಿಬಿಐಗೆ ಕೊಟ್ಟಿಲ್ಲ. ನಾವು ಹಲವು ಪ್ರಕರಣಗಳನ್ನು ಸಿಬಿಐಗೆ ಕೊಟ್ಟಿದ್ದೇವೆ ಎಂದರು.

# ಸಂಸತ್ ಕಲಾಪ ಮುಂದೂಡಿಕೆ: ನೀಟ್ ಪ್ರತಿಧ್ವನಿ

ಆಡಳಿತರೂಢ ಪಕ್ಷದ ಸದಸ್ಯರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದರು

ಈ ಹಂತದಲ್ಲಿ ಪ್ರತಿಕ್ರಿಸಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ನೀಟ್ ಪರೀಕ್ಷೆಯಲ್ಲಿನ ಲೋಪ ದೋಷಗಳಿಗೆ ಸಂಬಂಧಿಸಿದಂತೆ ಈಗಾಗಲೇ ಸಿಬಿಐ ತನಿಖೆಗೆ ಒಪ್ಪಿಸಲಾಗಿದೆ ಪ್ರಕರಣ ತನಿಖೆ ನಡೆಸುತ್ತಿದೆ,ತಪ್ಪಿತಸ್ಥರಿಗೆ ಶಿಕ್ಷೆ ಆಗಲಿದೆ ಎಂದರು.

ವಿರೋಧ ಪಕ್ಷಗಳು ಪ್ರಸ್ತಾಪಿಸುವ , ಯಾವುದೇ ಪ ವಿಷಯದ ಬಗ್ಗೆ ಚರ್ಚೆ ಮಾಡಲು ನಾವು ಬದ್ದರಾಗಿದ್ದೇವೆ.

ಸರ್ಕಾರವು ಯಾವಾಗಲೂ ಚರ್ಚೆಗೆ ಸಿದ್ಧವಾಗಿದೆ ಎಂದು ಪ್ರತಿ ಪಕ್ಷದ ಸದಸ್ಯರಿಗೆ ಭರವಸೆ ನೀಡಿದದ ಅವರು, ಕಾಂಗ್ರೆಸ್ ಸದನದ ಕಲಾಪಗಳಿಗೆ ಪಕ್ಷದ ಅಡ್ಡಿಪಡಿಸುವುದನ್ನು ತೀವ್ರವಾಗಿ ಖಂಡಿಸುತ್ತೇನೆ ಮತ್ತು ಭವಿಷ್ಯದಲ್ಲಿ ಇಂತಹ ಘಟನೆಗಳನ್ನು ತಡೆಯಲು ಸಹಕಾರಕ್ಕೆ ಮನವಿ ಮಾಡಿದರು

**ರಾಗಾ ಆಗ್ರಹ:**

ಸಂಸತ್ತಿನ ಸಂಕೀರ್ಣದಲ್ಲಿ ಸುದ್ದಿಗಾರ ರೊಂದಿಗೆ ಮಾತನಾಡಿದ ರಾಹುಲ್ ಗಾಂಧಿ, ನೀಟ್ ಪರೀಕ್ಷೆಯಲ್ಲಿನ ಅಕ್ರಮ ಬಹಳ ಗಂಭೀರವಾದ ವಿಷಯವಾಗಿದೆ. ಎಲ್ಲಕ್ಕಿಂತ ಮೊದಲು ಅದರ ಬಗ್ಗೆ ಚರ್ಚೆ ನಡೆಸುವಂತೆ ವಿರೋಧ ಪಕ್ಷಗಳು ಆಗ್ರಹಿಸಿವೆ ಎಂದು ಹೇಳಿದರು.

ಇದು ಯುವಕರಿಗೆ ಸಂಬಂಧಿಸಿದ ವಿಷಯವಾಗಿದೆ.

ಹಾಗಾಗಿ ಸಂಸತ್ ನೀಟ್ ವಿಷಯಕ್ಕೆ ಸಂಪೂರ್ಣ ದಿನವನ್ನು ಮೀಸಲಿಡಬೇಕು ಎಂದು ಅವರು ಒತ್ತಾಯಿಸಿದರು.

# ವಾಲ್ಮೀಕಿ ಹಗರಣ: ಡಿಸಿ ಕಚೇರಿ ಎದುರು ಪ್ರತಿಭಟನೆ

ಭ್ರಷ್ಟಾಚಾರ ನಡೆದಿದ್ದು, ಹೋರಾಟ ನಡೆಸುತ್ತೇವೆ. ಇಂದು ರಾಜ್ಯಾದ್ಯಂತ ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕುವ ಕಾರ್ಯಕ್ರಮ ನಡೆಸಿದ್ದೇವೆ ಎಂದರು.

ವಾಲ್ಮೀಕಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಸಚಿವರಾಗಿದ್ದ ನಾಗೇಂದ್ರ ರಾಜೀನಾಮೆ ಕೊಟ್ಟಿದ್ದಾರೆ ಸರಿ.

ಆದರೆ ಪ್ರಕರಣ ಇಲ್ಲಿಗೆ ಮುಗಿದಿಲ್ಲ. ಅಧಿಕಾರಿಗಳ ಮೇಲೆ ಆರೋಪ ಹಾಕಿ ಮುಖ್ಯಮಂತ್ರಿ ಸಿದ್ಧರಾಮಯ್ಯ ತೇಪೆ ಹಾಕಲು ಹೊರಟ್ಟಿದ್ದಾರೆ. ಈ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳು ಜವಾಬ್ದಾರಿ ಹೊರಬೇಕು.

ಹಾಗೆಯೇ ಸಚಿವರಾದ ಶರಣ ಪ್ರಕಾಶ್ ಪಾಟೀಲ್, ನಿಗಮದ ಅಧ್ಯಕ್ಷ ಬಸವರಾಜ ದದ್ದಲ್ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಈ ಹಗರಣಕ್ಕೆ ಸಂಬಂಧಿಸಿದಂತೆ ಇದುವರೆಗೂ ಎಸ್‌ಐಟಿ ಮಾಜಿ ಸಚಿವ ನಾಗೇಂದ್ರ ಅವರನ್ನು ಕರೆದು ವಿಚಾರಣೆ ಮಾಡುವ ಧೈರ್ಯ ತೋರಿಲ್ಲ.

ನಾಗೇಂದ್ರ ಆಪ್ತರ ಬಗ್ಗೆ ಆರೋಪಿಯಾಗಿರುವ ಸತ್ಯನಾರಾಯಣ ವರ್ಮ ಮಾಡಿರುವ ಆರೋಪ ಗಂಭೀರವಾದದ್ದು. ಈ ಬಗ್ಗೆ ನ್ಯಾಯಾಲಯವೂ ಸರ್ಕಾರಕ್ಕೆ ಛೀಮಾರಿ ಹಾಕಿದೆ ಎಂದು ಅವರು ಹೇಳಿದರು.

# ಸ್ವಾತಂತ್ರ್ಯ ದಿನ ವಂದೇ ಭಾರತ್ ಸ್ಲೀಪರ್ ರೈಲು ಸಂಚಾರ

ಮೂಲಗಳ ಪ್ರಕಾರ ವಂದೇ ಭಾರತ್ ಸ್ಲೀಪರ್ ರೈಲು ಮೊದಲ ಹಂತದಲ್ಲಿ ಗಂಟೆಗೆ 130 ಕಿಮೀ ವೇಗದಲ್ಲಿ ಚಲಿಸಲಿದೆ.

ಇದರ ನಂತರ, ರೈಲಿನ ವೇಗವನ್ನು ಕ್ರಮೇಣ 160 ರಿಂದ 220 ಕಿಮೀ ಗಂಟೆಗೆ ಹೆಚ್ಚಿಸುವ ಸಾಮರ್ಥ್ಯ ಹೊಂದಲಾಗಿದೆ ಎಂದು ಹೇಳಲಾಗಿದೆ.

ರೈಲ್ವೆ ಮಾರ್ಗ ಕಾರ್ಯನಿರತವಾಗಿರುವುದರಿಂದ ಮತ್ತು ಕಾಯ್ದಿರಿಸುವಿಕೆಗೆ ಯಾವಾಗಲೂ ಬೇಡಿಕೆ ಹೆಚ್ಚಿರುವುದರಿಂದ ದೆಹಲಿ ಮತ್ತು ಮುಂಬೈ ನಡುವೆ ವಂದೇ ಭಾರತ್ ಸ್ಲೀಪರ್ ರೈಲನ್ನು ಓಡಿಸಲು ರೈಲ್ವೆ ಯೋಜಿಸಿದೆ.

ಹೆಚ್ಚಿನ ಸಂಖ್ಯೆಯ ಪ್ರಯಾಣಿಕರ ಕಾರಣ, ರೈಲುಗಳು, ಹೆಚ್ಚಾಗಿ, ಈ ಮಾರ್ಗದಲ್ಲಿ ಪೂರ್ಣವಾಗಿ ಉಳಿಯುತ್ತವೆ, ಅನೇಕ ಪ್ರಯಾಣಿಕರು ಕಾಯ್ದಿರಿಸುವಿಕೆಯನ್ನು ಕಡಿಮೆ ಮಾಡುತ್ತಾರೆ. ಹಾಗಾಗಿ ಈ ಮಾರ್ಗದಲ್ಲಿ ವಂದೇ ಭಾರತ್ ಸ್ಲೀಪರ್ ರೈಲು ಓಡಿಸುವುದರಿಂದ ಪ್ರಯಾಣಿಕರಿಗೆ ಮತ್ತಷ್ಟು ಅನುಕೂಲವಾಗಲಿದೆ.

ಆಧುನಿಕ ಸೌಲಭ್ಯಗಳನ್ನು ಹೊಂದಿರುವ ವಂದೇ ಭಾರತ್ ಸ್ಲೀಪರ್ ರೈಲು ದೆಹಲಿಯಿಂದ ಮುಂಬೈಗೆ ಭೋಪಾಲ್ ಮತ್ತು ಸೂರತ್ ಮೂಲಕ ಪ್ರಯಾಣಿಸಲಿದೆ. ಕೆಲವು ದಿನಗಳ ಹಿಂದೆ ಕೇಂದ್ರ ರೈಲ್ವೇ ಸಚಿವ ಅಶ್ವಿನಿ ವೈಷ್ಣವ್ ಅವರು ಭಾರತದ ಮೊದಲ ವಂದೇ ಭಾರತ್ ಸ್ಲೀಪರ್ ರೈಲು 2 ತಿಂಗಳೊಳಗೆ ಟ್ರ್ಯಾಕ್‌ಗೆ ಬರಲಿದೆ ಎಂದು ಘೋಷಿಸಿದ್ದರು.

# ಏರ್‌ಪೋರ್ಟ್ ಟರ್ಮಿನಲ್-1ರ ಮೇಲ್ಚಾವಣಿ ಕುಸಿದು ಓರ್ವ ಸಾವು

ಮೇಲ್ಚಾವಣಿ ಹಾಗೂ ಭೀಮ್ ಗಳು ಕುಸಿದು ಬಿದ್ದಿವೆ. ಘಟನಾಸ್ಥಳಕ್ಕೆ ನಾಗರಿಕ ವಿಮಾನಯಾನಾ ಖಾತೆ ಸಚಿವ ರಾಮ್ ಮೋಹನ್ ನಾಯ್ಡು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಮಧ್ಯೆ ದೆಹಲಿಯಲ್ಲಿ ಧಾರಾಕಾರ ಮಳೆ ಸುರಿದ್ದಿದ್ದು ವಿಮಾನ ನಿಲ್ದಾಣ ತಲುಪುವ ರಸ್ತೆಯಲ್ಲಿ ನೀರು ನಿಂತಿದ್ದರಿಂದ ವಾಹನ ಸಂಚಾರ ತೀವ್ರ ಅಡ್ಡಿ ಉಂಟಾಯಿತು. ಬಿಸಿಲಿನಿಂದ ತತ್ತರಿಸಿದ ಜನರಿಗೆ ಮಳೆ ತಂಪುರೇಲಿದ್ದು, ದೆಹಲಿಯಲ್ಲಿ 153.7 ಮಿ.ಲೀ. ಮಳೆ ಸುರಿದಿದೆ. ನಗರದ ಬಹುತೇಕ ಭಾಗಗಳಲ್ಲಿ ಮಳೆ ಸುರಿದಿದ್ದು, ಜನಜೀವನ ಅಸ್ತವ್ಯಸ್ತಗೊಂಡಿತ್ತು.

## ಸಿದ್ದು ಎಷ್ಟು ದಿನ ಸಿಎಂ ಆಗಿರುತ್ತಾರೋ ಗೊತ್ತಿಲ್ಲ ಬಿವೈವಿ ವ್ಯಂಗ್ಯ

ಡಿ.ಕೆ. ಶಿವಕುಮಾರ್ ಒಟ್ಟಿಗೆ ಕಾಣಿಸೋದು ಏನು, ಇಬ್ಬರು ಪರಸ್ಪರ ತಿಂಡಿ ತಿನ್ನಿಸೋದು ಏನು, ಹೆಗಲ ಮೇಲೆ ಕೈ ಹಾಕುವುದು ಏನು, ಈಗ ಒಬ್ಬರಿಗೊಬ್ಬರು ಬುಡ ಕುಯ್ದುಕೊಳ್ಳುವ ಕೆಲಸ ಮಾಡಿಕೊಳ್ಳುತ್ತಿದ್ದಾರೆ. ರಸ್ತೆಯಲ್ಲಿ ನಿಂತುಕೊಂಡು ಹೊಡೆದಾಡಿಕೊಳ್ಳುವ ಪರಿಸ್ಥಿತಿ ಬಂದಿದೆ ಎಂದು ವ್ಯಂಗ್ಯವಾಡಿದರು.

ಮುಂದಿನ ದಿನಗಳಲ್ಲಿ ಇನ್ನು ಏನೇನು ಪರಿಸ್ಥಿತಿ ಬರುತ್ತದೋ ಗೊತ್ತಿಲ್ಲ. ಡಿ.ಕೆ. ಶಿವಕುಮಾರ್ ಅವರನ್ನು ಬಲಿ ಹಾಕಬೇಕೆಂದು ಹೆಚ್ಚುವರಿ ಡಿಸಿಎಂ ವಿಚಾರವನ್ನು ಸಚಿವರ ಮೂಲಕ ಎತ್ತಿದ್ದಾರೆ. ಇವರಿಗೆ ರಾಜ್ಯದ ಜನರ ಸಮಸ್ಯೆ ಬೇಕಿಲ್ಲ. ಅಭಿವೃದ್ಧಿ ಬಗ್ಗೆ ಆಸಕ್ತಿ ಇಲ್ಲ ಎಂದು ವಾಗ್ದಾಳಿ ನಡೆಸಿದರು.

ಬೆಲೆ ಏರಿಕೆ ಬಗ್ಗೆ, ಅಭಿವೃದ್ಧಿ ಬಗ್ಗೆ ಕೇಳಿದರೆ ಮುಖ್ಯಮಂತ್ರಿಗಳು ಉಡಾಫೆ ಉತ್ತರ ಕೊಡುತ್ತಿದ್ದಾರೆ. ಈ ಸರ್ಕಾರದ ವಿರುದ್ಧ ಜನ ವಿಶ್ವಾಸ ಕಳೆದುಕೊಂಡಿದ್ದಾರೆ. ಹೀಗಾಗಿ ನಮ್ಮ ಮುಂದೆ ಇರುವುದು ಹೋರಾಟದ ದಿನಗಳು ಎಂದು ಹೇಳಿದರು.

ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಆಗಬೇಕು ಎಂದು ನಿನ್ನೆ ಸ್ವಾಮೀಜಿಗಳು ಹೇಳಿಕೆ ಕೊಟ್ಟಿದ್ದಾರೆ. ಅದಕ್ಕೆ ಪ್ರತ್ಯುತ್ತರವಾಗಿ ಸಚಿವ ರಾಜಣ್ಣ ಉತ್ತರ ಕೊಟ್ಟಿದ್ದಾರೆ. ಜನರ ಪಾಲಿಗೆ ಸರ್ಕಾರ ಬದುಕಿದೆಯೇ ಎಂಬ ಪ್ರಶ್ನೆಯನ್ನು ಜನ ಕೇಳುತ್ತಿದ್ದಾರೆ ಎಂದು ವಿಜಯೇಂದ್ರ ಕಿಡಿಕಾರಿದರು.

ಉಪಚುನಾವಣೆ ಗೆಲುವು ನಮಗೆ ಮುಖ್ಯ

ಚನ್ನಪಟ್ಟಣದಿಂದ ನನ್ನ ಕುಟುಂಬದವರ ಸ್ಪರ್ಧೆ ಇಲ್ಲ ಎಂಬ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಟ್ವೀಟ್‌ಗೆ ಪ್ರತಿಕ್ರಿಯಿಸಿದ ವಿಜಯೇಂದ್ರ ಅವರು, ಚನ್ನಪಟ್ಟಣದಿಂದ ಕಾಂಗ್ರೆಸ್ ಅಭ್ಯರ್ಥಿ ಯಾರಾಗುತ್ತಾರೆ ಎಂಬುದು ನಮಗೆ ಮುಖ್ಯವಲ್ಲ. ಆ ಪಕ್ಷದಿಂದ ಯಾರೇ ಅಭ್ಯರ್ಥಿಯಾದರೂ ಬಿಜೆಪಿ ಮತ್ತು ಜೆಡಿಎಸ್ ಒಟ್ಟಾಗಿ ಚುನಾವಣೆ ಎದುರಿಸಿ ಗೆಲ್ಲುತ್ತೇವೆ. ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಿಂದ ಏನು ಫಲಿತಾಂಶ ಬಂದಿದೆ ಎಂಬುದು ಎಲ್ಲರಿಗೂ ಗೊತ್ತಿದೆ ಎಂದರು.

ಚನ್ನಪಟ್ಟಣ, ಶಿಗ್ಗಾಂವಿ, ಸಂಡೂರು ಈ ಉಪಚುನಾಪಣೆಯಲ್ಲಿ ನಾವು ಗೆದ್ದೇ ಗೆಲ್ಲುತ್ತೇವೆ ಎಂದು ಹೇಳಿದರು. ಈ ಉಪಚುನಾವಣೆಗೆ ಅಭ್ಯರ್ಥಿಗಳ ಆಯ್ಕೆ ಸಂಬಂಧ ಶೀಘ್ರ ಕೋರ್ ಕಮಿಟಿ ಸಭೆ ಕರೆಯಲಾಗುವುದು. ಈ ಸಭೆಯಲ್ಲಿ ಸರ್ಕಾರದ ವಿರುದ್ಧ ಹೋರಾಟದ ರೂಪು ರೇಷೆಗಳ ಬಗ್ಗೆಯೂ ಚರ್ಚೆ ಮಾಡಲಾಗುವುದು ಎಂದು ಅವರು ಹೇಳಿದರು.

# ಭೀಕರ ಅಪಘಾತ: 13 ಸಾವು

ಮಂಜುಳಾಬಾಯಿ, ಚಾಲಕ ಆದರ್ಶ (23), ಮಾನಸ (24), ರೂಪಾ (40), ಮಂಜುಳಾ (50) ಮೃತರು ಮೃತಪಟ್ಟವರು.

ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡಿರುವ ನಾಲ್ವರನ್ನು ಜಿಲ್ಲಾ ಆಸ್ಪತ್ರೆಗೆ ( ದಾಖಲಿಸಲಾಗಿದ್ದು ಅವರಲ್ಲಿ ಇಬ್ಬರು ಸ್ಥಿತಿ ಚಿಂತಾಜನಕವಾಗಿದೆ. ಮೃತ ನಾಗೇಶ್ ಎಮ್ಮೆಹಟ್ಟಿ ಗ್ರಾಮದ ಕೃಷಿಕರಾಗಿದ್ದರೆ,ಅವರ ಪತ್ನಿ ವಿಶಾಲಾಕ್ಷಿ ಆಶಾ ಕಾರ್ಯಕರ್ತೆಯಾಗಿದ್ದರು, ನಾಗೇಶ್ ಮತ್ತು ವಿಶಾಲಕ್ಷಿ ದಂಪತಿ ಪುತ್ರ ಆದರ್ಶ ಹೊಸ ಸೆಕೆಂಡ್ ಹ್ಯಾಂಡ್ ಟಿಟಿ ವಾಹನ ಖರೀದಿಸಿದ್ದರು.

ಹೊಸ ಟಿಟಿ ವಾಹನಕ್ಕೆ ಪೂಜೆ ಮಾಡಿಸಲು ಹೋಗಿದ್ದ ಕುಟುಂಬದವರು ಸೇರಿ 15 ಮಂದಿ ಕಳೆದ ಜೂ. 24 ರಂದು ಮಧ್ಯಾಹ್ನ 12 ಗಂಟೆಗೆ ಸುಮಾರಿಗೆ ಶಿವಮೊಗ್ಗದಿಂದ ಹೊರಟು, ಮಹಾರಾಷ್ಟ್ರ ತಿವಾರಿ ಲಕ್ಷ್ಮೀ ದೇವಸ್ಥಾನ ತಲುಪಿದ್ದಾರೆ. ಅಲ್ಲಿ ವಾಹನ ಪೂಜೆ ಮಾಡಿಸಿ, ಬಳಿಕ ತುಳಜಾಭವಾನಿ ದೇವಸ್ಥಾನಕ್ಕೆ ತೆರಳಿ ದೇವಿಯ ದರ್ಶನ ಪಡೆದಿದ್ದಾರೆ. ನಂತರ ಕಲಬುರಗಿ ಜಿಲ್ಲೆಯ ಚಿಂಚೋಳಿಯ ಮಾಯಮ್ಮ ದೇವಸ್ಥಾನಕ್ಕೆ ಹೋಗಿದ್ದಾರೆ.

ಅಲ್ಲಿಂದ ಬೆಳಗಾವಿ ಜಿಲ್ಲೆಯ ಸವದತ್ತಿಗೆ ಆಗಮಿಸಿ, ರೇಣುಕಾ ಯಲ್ಲಮ್ಮನ ದರ್ಶನ ಪಡೆದು ಮರಳಿ ಊರಿಗೆ ಹೋಗುವಾಗ ಈ ಭೀಕರ ಅಪಘಾತ ಸಂಭವಿಸಿದೆ. 15 ದಿನಗಳ ಹಿಂದೆ ಖರೀದಿ: ಅಪಘಾತ ಸಂಭವಿಸಿದ ಸೆಕೆಂಡ್ ಹ್ಯಾಂಡ್ ಟೆಂಪೋ ಟ್ರಾವೆಲರ್( ಟಿಟಿ) ವಾಹನವನ್ನು 15 ದಿನಗಳ ಹಿಂದೆಯಷ್ಟೇ ಖರೀದಿಸಲಾಗಿತ್ತು.ದೇವರ ದರ್ಶನಕ್ಕೆ ಕುಟುಂಬ ಸಮೇತ ತೆರಳಿದ್ದ ಚಾಲಕ ಆದರ್ಶ, ಪೂಜೆಯ ಬಳಿಕ ಅದರ ಫೋಟೋಗಳನ್ನು ತಮ್ಮ ಸ್ಟೇಟಸ್‌ನಲ್ಲಿ ಹಾಕಿಕೊಂಡಿದ್ದರು.

ರಸ್ತೆ ಬದಿ ನಿಲ್ಲಿಸಿದ್ದ ಲಾರಿಯನ್ನು ಮುಂಜಾನೆ ಕವಿದಿದ್ದ ಮಂಜು ಕವಿದಿದ್ದರಿಂದ ಲಾರಿ ಕಾಣಿಸದೇ ಟಿಟಿ ಚಾಲಕ ಆದರ್ಶ ಡಿಕ್ಕಿ ಹೊಡೆದು ಅಪಘಾತ ಸಂಭವಿಸಿರಬಹುದು ಎಂದು ಶಂಕಿಸಲಾಗಿದೆ.

ಅಪಘಾತದ ಪರಿಣಾಮ ಟಿಟಿ ವಾಹನ ಸಂಪೂರ್ಣವಾಗಿ ನಜ್ಜುಗುಜ್ಜಾಗಿ, ಅದರಲ್ಲಿ ಮೃತದೇಹಗಳು ಅಪ್ಪಚ್ಚಿಯಾಗಿದ್ದು, ಅಗ್ನಿಶಾಮಕ ಇಲಾಖೆ ಸಿಬ್ಬಂದಿ ಹರಸಾಹಸ ಪಟ್ಟು ಮೃತದೇಹಗಳನ್ನು ಹೊರ ತೆಗೆದಿದ್ದಾರೆ.

**ಅತಿವೇಗದ ಚಾಲನೆ:**

ಈ ಬಗ್ಗೆ ಹಾವೇರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಂಶಿಕುಮಾರ್ ಮಾತನಾಡಿ, ಟಿಟಿ ವಾಹನದಲ್ಲಿದ್ದ ಒಟ್ಟು 15 ಮಂದಿ ಸವದತ್ತಿ ರೇಣುಕಾ ಯಲ್ಲಮ್ಮ ದರ್ಶನ ಪಡೆದು ಮರಳಿ ಊರಿಗೆ ಹೋಗುತ್ತಿರುವಾಗ ಅಪಘಾತ ಸಂಭವಿಸಿದೆ. ಅತಿವೇಗದ ಚಾಲನೆಯೇ ಅಪಘಾತಕ್ಕೆ ಕಾರಣವಾಗಿದ್ದು, ಮಹಿಳೆಯರು, ಎರಡು ಪುಟ್ಟ ಕಂದಮ್ಮಗಳು, ಇಬ್ಬರು ಗಂಡು ಮಕ್ಕಳು, ಡ್ರೈವರ್ ಮೃತಪಟ್ಟಿದ್ದಾರೆ. ಮೃತ ದೇಹಗಳನ್ನು ಹಾವೇರಿ ಜಿಲ್ಲಾ ಆಸ್ಪತ್ರೆಯ ಶವಗಾರಕ್ಕೆ ರವಾನಿಸಲಾಗಿದೆ. ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬ್ಯಾಡಗಿ ಠಾಣಾ ಪೊಲೀಸರು ದಾಖಲಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಗೃಹರಕ್ಷಕ ಡಿಜಿಪಿ ಕಮಲ್ ಪಂತ್ ನಿವೃತ್ತಿ

ಪೂರ್ವ ವಿಭಾಗದಲ್ಲಿ ನಡೆದ ಭಾರೀ ಗಲಭೆ, ಡಿಜೆ ಹಳ್ಳಿ ಮತ್ತು ಕೆ.ಜಿ.ಹಳ್ಳಿ ಪೊಲೀಸ್ ಠಾಣೆಗಳ ಮೇಲೆ ದಾಳಿ, ಸಾರ್ವಜನಿಕ ಮತ್ತು ಖಾಸಗಿ ಆಸ್ತಿಯನ್ನು ಧ್ವಂಸಗೊಳಿಸಿ ಶಾಸಕರ ಮನೆಗೆ ಬೆಂಕಿ ಹಚ್ಚಲಾಗಿದ್ದನ್ನು ಸಮರ್ಥವಾಗಿ ನಿಭಾಯಿಸಿದ್ದರು.

**ಅತ್ಯುತ್ತಮ ಕಮಿಷನರ್:**

ಸ್ಯಾಂಡಲ್ ವುಡ್ ನ ಹಲವು ನಟ-ನಟಿಯರು ಸಿಲುಕಿದ್ದ ಡ್ರಗ್ಸ್ ಪ್ರಕರಣ, ಬಿಟ್‌ಕಾಯಿನ್ ಹಗರಣ ಸೇರಿ ಹಲವು ಸವಾಲಾಗಿದ್ದ ಪ್ರಕರಣಗಳನ್ನು ವಿವಾದಗಳಿಗೆ ಎಡೆಮಾಡದೇ ನಿಭಾಯಿಸಿ ರಾಜ್ಯ ಸರ್ಕಾರಕ್ಕೆ ಒಳ್ಳೆಯ ಹೆಸರು ಬರಲು ಕಾರಣರಾಗಿದ್ದರು.

ತಮ್ಮ ಅಧಿಕಾರಾವಧಿಯಲ್ಲಿ ಹಲವು ಸೂಕ್ಷ್ಮ ಪರಿಸ್ಥಿತಿಯನ್ನು ನಿಭಾಯಿಸಿ ಕೆಲವು ಕಠಿಣ ನಿರ್ಧಾರಗಳನ್ನು ಕೈಗೊಂಡು ಕೆಳಹಂತದ ಅಧಿಕಾರಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅತ್ಯುತ್ತಮ ಕಮೀಷನರ್ ಎನ್ನುವ ಖ್ಯಾತಿಗೆ ಪಾತ್ರವಾಗಿದ್ದರು.

2015ರಲ್ಲಿ ಕಾರಾಗೃಹ ಎಡಿಜಿಪಿಯಾಗಿ, ಲೋಕಾಯುಕ್ತ ಕಚೇರಿಯಲ್ಲಿ ನಡೆದಿದ್ದ ಬಹುಕೋಟಿ ಭ್ರಷ್ಟಾಚಾರ ಹಗರಣದ ತನಿಖೆಗೆ ವಿಶೇಷ ತನಿಖಾ ತಂಡದ ಮುಖ್ಯಸ್ಥರಾಗಿ ನೇಮಕಗೊಂಡಿದ್ದ ಅವರು, ಅಂದಿನ ಲೋಕಾಯುಕ್ತರ ಪುತ್ರ ಹಾಗೂ ಇತರ ಆರೋಪಿಗಳ ಪಟ್ಟಿ ಸಲ್ಲಿಸಿದ್ದರು.

ರಾಜ್ಯದಲ್ಲಿ ಪೊಲೀಸ್ ಸೇವೆಯಿಂದ ನನ್ನ ವೃತ್ತಿಜೀವನದುದ್ದಕ್ಕೂ ದೊರೆತ ಮನ್ನಣೆ ಮತ್ತು ಬೆಂಬಲಕ್ಕೆ ನಾನು ಕೃತಜ್ಞನಾಗಿದ್ದೇನೆ ಸಂತೃಪ್ತನಾಗಿ ನಿವೃತ್ತನಾಗುತ್ತಿದ್ದೇನೆ ಎನ್ನುತ್ತಾರೆ ಕಮಲ್ ಪಂತ್.

**ಮೊಹಾಂತಿ ಡಿಜಿಪಿ:**

ಕಮಲ್ ಪಂತ್ ಅವರ ನಿವೃತ್ತಿಯಿಂದ ಪೊಲೀಸ್ ಕಂಪ್ಯೂಟರ್ ವಿಂಗ್ ನ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ (ಎಡಿಜಿಪಿ), ಪ್ರಣಬ್ ಮೊಹಾಂತಿ ಅವರು ಡಿಜಿಪಿಯಾಗಿ ಬಡ್ತಿ ಪಡೆಯಲಿದ್ದು,ಅವರು 1994 ರ ಬ್ಯಾಚ್‌ನ ಐಪಿಎಸ್ ಅಧಿಕಾರಿಯಾಗಿದ್ದಾರೆ.

# ಒಡೆಯರ್ ಹಾಗೂ ಸಂತ್ರಾಜ್‌ಗೆ ಬಸವ ಭೂಷಣ ಪ್ರಶಸ್ತಿ





ರಾಯಚೂರ:

ಮುದಗಲ್ ಪಟ್ಟಣದ ಹಿರಿಯ ಪತ್ರಕರ್ತರಾದ ಡಾ.ಶರಣಯ್ಯ ಬಿ.ಒಡೆಯರ್ ಹಾಗೂ ಸ್ಥಳಿಯ ಹಳೆಪೇಟೆಯ ಶಿಲ್ಪಕಲಾವಿದ ನೂರ ಮಹ್ಮದ ಸಂತ್ರಾಜ್ ರವರು 'ಹೆಣ್ಣು ಜಗದ ಕಣ್ಣು' ಸಾಹಿತ್ಯ ವೇದಿಕೆ ಪ್ರತಿವರ್ಷ ನೀಡುವ 'ಬಸವ ಭೂಷಣ' ಪ್ರಶಸ್ತಿಗೆ ಭಾಜನರಾಗಿದ್ದಾರೆ. ಪತ್ರಿಕೋಧ್ಯಮ, ಮಾನವಿಯ ಮೌಲ್ಯ ಹಾಗೂ ಸಾಮಾಜಿಕ ಸೇವೆಯಲ್ಲಿ ತೊಡಗಿರುವ ಡಾ.ಶರಣಯ್ಯ ಬಿ. ಒಡೆಯರ್ ಮತ್ತು ಶಿಲ್ಪಕಲೆಯ ಮೂಲಕ ಅಂತರಾಜ್ಯದಲ್ಲಿ ಗುರುತಿಸಿಕೊಡಿರುವ ನೂರ ಮಹ್ಮದ ಸಂತ್ರಾಜ್ ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಕೊಪ್ಪಳದಲ್ಲಿ ಜು. 30ರಂದು ಜರುಗುವ 3ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಶ್ರೀಗವಿಸಿದ್ದೇಶ್ವರ ಮಠದ ಶ್ರೀಗಳ ಸಾನಿದ್ಯದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ವೇದಿಕೆ ಸಂಸ್ಥಾಪಕ ರಮೇಶ ನಾಯಕ ತಿಳಿಸಿದ್ದಾರೆ.

# ಅತೀ ಹೆಚ್ಚು ಅಂಕ ಪಡೆದ ಸಂಚನಾಗೆ ಸತ್ಕಾರ



ಮೂಡಲಗಿ:-

ತಾಲೂಕಿನ ಗುರ್ಲಾಪೂರ ಗ್ರಾಮದ ಶ್ರೀ ರೇವಣಸಿದ್ದೇಶ್ವರ ವಿವಿಧ ಉದ್ದೇಶಗಳ ಜನ ಸಹಕಾರಿ ಸಂಘದಲ್ಲಿ ಕುಮಾರಿ ಸಂಚನಾಗೆ ಸಂಘದ ಅದ್ಯಕ್ಷರಾದ ರಾಮಪ್ಪ ನೇಮಗೌಡರ ಅಧ್ಯಕ್ಷತೆಯಲ್ಲಿ ಸಂಘದ ಕಾರ್ಯಾಲಯದಲ್ಲಿ ಸತ್ಕಾರ ಮಾಡಲಾಯಿತು. 2023-24 ನೆಯ ಸಾಲಿನ ಗ್ರಾಮದ ವಿದ್ಯಾರ್ಥಿನಿಯಾದ ಕುಮಾರಿ ಸಂಚನಾ ಸು. ಶಿವಾಪೂರ ಇವಳು 10 ನೇ ತರಗತಿಯಲ್ಲಿ ಕರ್ನಾಟಕ ರಾಜ್ಯಕ್ಕೆ 8 ನೇ ಸ್ಥಾನ ಪಡೆದು ಮೂಡಲಗಿ ವಲಯಕ್ಕೆ ದ್ವಿತೀಯ ಸ್ಥಾನ ಪಡೆದು ತಾನು ಕಲಿತ ಚೈತನ್ಯ ಆಶ್ರಮ ಪ್ರಾಥಮಿಕ ಮತ್ತು ಪ್ರೌಢ ವಸತಿ ಶಾಲೆ ನಾಗನೂರ-ಮೂಡಲಗಿಹಾಗೂ ಗುರ್ಲಾಪೂರ ಗ್ರಾಮಕ್ಕೆ 625.ಕ್ಕೆ 618 ಅಂಕ ಪಡೆದ ಕುಮಾರಿಗೆ ಸತ್ಕಾರಿಸಿದರು. ರಾಮಪ್ಪ ನೇಮಗೌಡರ ಹಿಂತ ವಿದ್ಯಾರ್ಥಿಗಳು ಮುಂದಿನ ದಿನಗಳಲ್ಲಿ ಅತೀ ಹೆಚ್ಚಿನ ಸಂಖ್ಯೆಯಲ್ಲಿ ಅಂಕ ಗಳಸಬೇಕೆಂದರು. ಕುಮಾರಿ ಮಾಡಿದ ಸಾಧನೆ ಗುರಿಯಾಗಿ ಇಟ್ಟುಕೊಳ್ಳಲಿ ಎಂದರು. ಆರಂಭದಲ್ಲಿ ಸಂಘದ ಕಾರ್ಯದರ್ಶಿಯಾದ ಆನಂದ ಶಿವಾಪೂರ ಪ್ರಾಸ್ತಾವಿಕ ವಾಗಿ ಮಾತನಾಡುತ್ತಾ ಕುಮಾರಿಗೆ ಅಭಿನಂದನಗೆಳು ತಿಳಿಸುತ್ತಾ ಸರ್ವರನ್ನು ಸ್ವಾಗತಿಸಿದರು. ಸತ್ಕಾರ ಸ್ವಿಕರಿಸಿದ ಕುಮಾರಿ ನನ್ನು ಗುರುತಿಸಿ ಕ-ರೆದು ಸತ್ಕಾರ ಮಾಡಿದ ಸಂಘದ ಅಧ್ಯಕ್ಷರಿಗೆ ಹಾಗೂ ಉಪಾದ್ಯಕ್ಷರು ಮತ್ತು ಆಡಳಿತ ಮಂಡಳಿಯ ಎಲ್ಲ ಸದಸ್ಯರು ಹಾಗೂ ಸಿಬ್ಬಂದಿ ವರ್ಗದವರಿಗೆ ನಾನುತುಂಬುಹೃದಯದ ಅಭಿನಂದನೆಗಳನ್ನು ತಿಳಿಸುತ್ತಾ ಸಂಘವು ಅಭಿವೃದ್ಧಿ ಪತದತ್ತ ಸಾಗಿ ನಮ್ಮಂತವರಿಗೆ ದಾರಿದೀಪವಾಗಲಿ ಎಂದಳು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷರಾದ ಮಹಾದೇವ ರಂಗಾಪೂರ ನಿರ್ದೇಶಕರಾದ ಬಸಪ್ಪ ಗಾಣಿಗೇರ, ಲಗಮಪ್ಪ ಹಳ್ಳೂರ, ಸಿದ್ದಪ್ಪ ಸುಳ್ಳನವರ, ವಿಠ್ಠಲ ಜಾಧವ, ರೇವಪ್ಪ ಸತ್ತಿಗೇರಿ, ಶ್ರೀಶೈಲ ನೇಮಗೌಡರ, ಹಣಮಂತ ಬಂಡಿವಡ್ಡರ, ಅಶೋಕ ಗಾಣಿಗೇರ, ಶೇಖರಯ್ಯಾ ಹಿರೇಮಠ, ಜಯಪ್ರಕಾಶ ಗಾಣಿಗೇರ, ವಿದ್ಯಾರ್ಥಿಯ ತಂದೆಯಾದ ಸುಭಾಸ ಶಿವಾಪೂರ, ಆದಿನಾಥ ತರಗಾರ, ಧರೆಪ್ಪ ಮಿರ್ಜಿ, ಸಚೀನ ಮೇಳನ್ನವರ, ಹಾಗೂ ಸದಸ್ಯರು ಉಪಸ್ಥಿತಿರಿದ್ದರು. ಕಾರ್ಯಕ್ರಮ ನಿರೂಪಣೆ ಮತ್ತು ವಂದನಾರ್ಪಣೆಯನ್ನು ಬಸಯ್ಯಾ ಹಿರೇಮಠ ನೇರೆವೆರಿಸಿದರು.

# ನಾಡ ಕಛೇರಿಯಲ್ಲಿ ದಲ್ಲಾಳಿಗಳ ಹಾವಳಿ ತಡೆಗೆ ಕರವೇ ಒತ್ತಾಯ



ಮೂಡಲಗಿ:-

ಅರಭಾಂವಿಯಲ್ಲಿ ನಾಡ ಕಛೇರಿಗೆ ಬರುವ ಸಾರ್ವಜನಿಕರಿಗೆ ಎಜೆ-ಂಟರಿಂದ ನಿತ್ಯ ಕಿರುಕುಳವಾಗುತ್ತಿದ್ದು ಹಣ ನೀಡಿದರೆ ಶೀಘ್ರವಾಗಿ ಕೆಲಸ ಇಲ್ಲದಿದ್ದರೆ ಯಾವ ಕೆಲಸಗಳು ಆಗುವದಿಲ್ಲ ಇದನ್ನು ಆದಷ್ಟು ಬೇಗನೆ ನಿಲ್ಲಿಸಬೇಕು ಇರದಲ್ಲಿ ಶಾಮಿಲಾಗಿರುವ ಖಾಸಗಿ ಸಿಬ್ಬಂದಿ ವರ್ಗವನ್ನು ತೆಗೆದು ಹಾಕಬೇಕು ಎಂದು ಕರುನಾಡ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷ ಸಿದ್ದು ಕಂಕಣವಾಡಿ ಆಗ್ರಹಿಸಿದರು. ಮೂಡಲಗಿ ತಾಲೂಕಾ ಡಂಡಾದಿಕಾರಿಗಳ ಕಛೇರಿ ಆವರದಲ್ಲಿ ಕರುನಾಡ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಮರಕುಂಬಿ ನೇತೃತ್ವದಲ್ಲಿ ತಹಶೀಲ್ದಾರ ಮಹಾದೇವ ಸನಮೂರಿ ಅವರಿಗೆ ಮನವಿ ನೀಡಿ ಮಾತನಾಡಿದರು. ರಾಜ್ಯ ಕಾರ್ಯದರ್ಶಿ ಮಂಜುನಾಥ ಜಲ್ಲಿ ಮನವಿ ಓದಿ ಈ ಕುರಿತು ತಹಶೀಲ್ದಾರ ಅವರು ಎಜೆಂಟರ ಮೇಲೆ ಹಾಗೂ ಖಾಸಗಿ ಸಿಬ್ಬಂದಿಗಳ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಏಜೆಂಟರು ಹಾಗೂ ಖಾಸಗಿ ಸಿಬ್ಬಂದಿಗಳು ಹಣದ ಹೊಂದಾಣಿಕೆ ಮಾಡಿಕೊಂಡು ಸಾರ್ವಜನಿಕರಲ್ಲಿ ಹೆಚ್ಚಿನ ಹಣವನ್ನು ವಸೂಲಿ ಮಾಡಿತ್ತಿದ್ದು, ಖಾಸಗಿ ಸಿಬ್ಬಂದಿಗಳು ಕಛೇರಿಯ ಕೆಲಸಕ್ಕೆ ಬರುವ ಸಾರ್ವಜನಿಕರಿಗೆ ಅಸಭ್ಯವಾಗಿ ಮಾತನಾಡುತ್ತಾರೆ, ಏಜೆಂಟರು ಕಛೇರಿಯಲ್ಲಿ ಕಾಲ ಕಳೆಯುತ್ತಾರೆ ಇದಕ್ಕೆ ಕಡಿವಾಣ ಹಾಕಬೇಕು,ಇಲ್ಲದಿದ್ದರೆ ಕರುನಾಡ ರಕ್ಷಣಾ ವೇದಿಕೆಯಿಂದ ಬೃಹತ ಮಟ್ಟದ ಹೋರಾಟ ಮಾಡಬೇಕಾಗುತ್ತದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ. ಗೋಪಾಲ ಗೋಪಾಳಿ, ಲಕ್ಷ್ಮಣ ಪೂಜೇರಿ, ಬಸು ಮಲ್ದಾರಿ, ವಿಠಲ ಪೂಜೇರಿ, ಆನಂದ ಕೋಳಿ, ಮುತ್ತಪ್ಪ ಪೂಜೇರಿ, ಹಣಮಂತ ಕಳ್ಯಾಗೋಳ, ಹಾಲಪ್ಪ ಪೂಜೇರಿ, ಲಕ್ಕಪ್ಪ ಪೂಜೇರಿ, ಬಸವರಾಜ ಪೂಜೇರಿ ಮನವಿ ನೀಡಿದರು.

# ಜನಸ್ಪಂದನ ಕಾರ್ಯಕ್ರಮ: ಚಂದ್ರು ಲಮಾಣಿ



ಶಿರಹಟ್ಟಿ:–

ಸರ್ಕಾರಿ ಸೌಲಭ್ಯಗಳನ್ನು ತಲುಪಿಸಲು ವಿನಾಕಾರಣ ಸಾರ್ವಜನಿಕರನ್ನು ಕಚೇರಿಗಳಿಗೆ ಅಲೆದಾಡಿಸದೆ ಅವರ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ನೀಡಬೇಕೆಂದು ಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಸೂಚನೆ ನೀಡಿದರು.

ಅವರು ಪಟ್ಟಣ ಸಾಮರ್ಥ್ಯ ಸೌಧದಲ್ಲಿ ನಡೆದ ಜನಸ್ಪಂಧನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ, ಜನಸ್ಪಂದನ ಕಾರ್ಯಕ್ರಮವು ಕೇವಲ ವೇದಿಕೆ ಕಾರ್ಯಕ್ರಮಕ್ಕಷೆ ಸೀಮಿತವಾಗಬಾರದು. ಜನರ ಅಹವಾಲುಗಳಿಗೆ ಪರಿಹಾರ ದೊರೆತಾಗ ಮಾತ್ರ ಜನಸ್ಪಂದನ ಕಾರ್ಯಕ್ರಮ ಅರ್ಥಪೂರ್ಣವಾಗುತ್ತದೆ. ಮುಂದಿನ ಸಭೆಯ ಒಳಗಾಗಿ ಈ ಎಲ್ಲ ಸಮಸ್ಯೆಗಳಿಗೆ ಪರಿಹಾರ ಒದಗಿಸಲು ಮುಂದಾಗಬೇಕು ಎಂದರು

ಜನಸ್ಪಂದನ ಕಾರ್ಯಕ್ರಮದಲ್ಲಿ ಸ್ವೀಕೃತ ಅಹವಾಲುಗಳ ಅರ್ಜಿಗಳನ್ನು ಆದಷ್ಟು ಬೇಗ ಬಗೆಹರಿಸುವ ಮೂಲಕ ವಿಲೇವಾರಿ ಮಾಡಬೇಕು. ಕಾನೂನು ತೊಡಕು ಇರುವ ಅರ್ಜಿಗಳನ್ನು ಹೊರತುಪಡಿಸಿ ಉಳಿದ ಅರ್ಜಿಗಳನ್ನು ಬಾಕಿಯಿಟ್ಟುಕೊಳ್ಳಬಾರದೆಂದು ನಿರ್ದೇಶನ ನೀಡಿದರಲ್ಲದೆ ಸರ್ಕಾರಿ ಸೇವೆಯಲ್ಲಿ ಅಧಿಕಾರಿಗಳು ತಮ್ಮ ಜವಾಬ್ದಾರಿ ಅರಿತು ಕರ್ತವ್ಯವನ್ನು ಸಮರ್ಪಕವಾಗಿ ನಿರ್ವಹಿಸಿದಾಗ ಮಾತ್ರ ಜನರು ಸಮಸ್ಯೆಗಳಿಂದ ದೂರವಿರಲು ಸಾಧ್ಯ. ಎಂದು ಹೇಳಿದರು.

ಕಟ್ಟಡ ಕಾರ್ಮಿಕ ಇಲಾಖೆಯಿಂದ ಪಿಯುಸಿ ಪ್ರಥಮ ವರ್ಷ ಓದುತ್ತಿರುವ 11 ಕಾರ್ಮಿಕರ ಮಕ್ಕಳಿಗೆ ಹಾಗೂ ದ್ವಿತಿಯ ಪಿಯುಸಿ ಓದುತ್ತಿರುವ 9 ಮಕ್ಕಳಿಗೆ ಉಚಿತ ಕಂಪ್ಯೂಟರ್ ವಿತರಣೆ ಮಾಡಿದ್ದೇವೆ ಇದರ ಸದುಪಯೋಗವನ್ನು ಪಡೆದುಕೊಳ್ಳಿ ಎಂದು ಸಲಹೆ ನೀಡಿದರು.

ಈ ವೇಳೆ ಜಿಲ್ಲಾಧಿಕಾರಿ ವೈಶಾಲಿ ಎಂ ಎಲ್ ಮಾತನಾಡುತ್ತಾ, ಕಂದಾಯ ಇಲಾಖೆಗೆ ಸಂಬಂಧಿಸಿದಂತೆ 6, ಭೂಮಾಪನ ಇಲಾಖೆಗೆ 16, ಸಮಾಜ ಕಲ್ಯಾಣ ಇಲಾಖೆಗೆ 04, ಕೃಷಿ ಇಲಾಖೆಗೆ 03, ಪಟ್ಟಣ ಪಂಚಾಯತ್‌ಗೆ 20, ಪೊಲೀಸ್ ಇಲಾಖೆಗೆ 04, ಶಿಕ್ಷಣ ಇಲಾಖೆಗೆ 02, ಕಾರ್ಮಿಕ ಇಲಾಖೆಗೆ 1, ಸಾರಿಗೆ ಇಲಾಖೆಗೆ 1, ಅಗ್ನಿಶಾಮಕ ಇಲಾಖೆಗೆ 1, ಆರೋಗ್ಯ ಇಲಾಖೆಗೆ 1, ಹೆಸ್ಕಾಂ ಇಲಾಖೆಗೆ 1 ಹಾಗೂ ತಾಲೂಕು ಪಂಚಾಯತ್‌ಗೆ 1, ಒಟ್ಟು 61 ಅರ್ಜಿಗಳು ಜನಸ್ಪಂಧನಾ ಕಾರ್ಯಕ್ರಮದಲ್ಲಿ ಸ್ವೀಕೃತಿಯಾಗಿವೆ. ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಭರತ್ ಎಸ್, ಎಸ್ ಪಿ. ಬಿ ಎಸ್. ನೇಮಗೌಡ, ತಹಶೀಲ್ದಾರ ಅನೀಲ ಬಡಿಗೇರ ಹಾಗೂ ತಾಲೂಕು ಮಟ್ಟದ ಎಲ್ಲ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರ ಭೇಟಿ



ಕಲಬುರಗಿ:–

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ಕೆ.ಟಿ. ಗುರುವಾರ ಜಿಲ್ಲೆಯ ಕಲಬುರಗಿ ತಲೂಕಿನ ನಂದೂರ (ಬಿ) ಮತ್ತು ಚಿತ್ತಾಪೂರ ತಾಲೂಕಿನ ಹಣ್ಣಿಕೇರಾ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಮಕ್ಕಳ ಹಕ್ಕುಗಳ ರಕ್ಷಣಾ ವ್ಯವಸ್ಥೆ ಬಗ್ಗೆ ಪರಿಶೀಲಿಸಿದರು.

ನಂದೂರು (ಬಿ) ಪ್ರಾಥಮಿಕ ಶಾಲೆಗೆ ಭೇಟಿ ನೀಡಿದ ಅವರು ಮಕ್ಕಳೊಂದಿಗೆ ಸಂವಾದ ನಡೆಸಿ ಅವರ ಕುಂದುಕೊರತೆ ಆಲಿಸಿದರು. ಹೆಣ್ಣು ಮಕ್ಕಳು ಶಾಲೆಯಲ್ಲಿ ಶೌಚಾಲಯ ಬಳಕೆಗೆ ಇಲ್ಲ ಶೌಚಾಲಯಕ್ಕ ಬಯಲೆ ಗತಿ ಎಂದು ಸದಸ್ಯರ ಗಮನಕ್ಕೆ ತಂದರು. ಶಾಲೆಯಲ್ಲಿ ಶೌಚಾಲಯ ಕಟ್ಟಡವಿದ್ದರು ಅದನ್ನು ಸಮರ್ಪಕವಾಗಿ ಬಳಸದಿದ್ದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಸದಸ್ಯ ಡಾ.ತಿಪ್ಪೇಸ್ವಾಮಿ ಕೆ.ಟಿ. ಅವರು ಕೂಡಲೆ ಇದನ್ನು ಸರಿಪಡಿಸುವಂತೆ ಶಾಲೆ ಶಿಕ್ಷಕರಿಗೆ ಸೂಚನೆ ನೀಡಿದರು. ಪ್ರಾಥಮಿಕ ಶಾಲೆಯ 7 ತರಗತಿಗಳಿಗೆ ನಾಲ್ಕೇ ಶಿಕ್ಷಕರು ಇರುವುದನ್ನು ಅರಿತ ರಕ್ಷಣಾ ಆಯೋಗದ ಸದಸ್ಯರು ಶಿಕ್ಷಕರಿಲ್ಲದೆ ಮಕ್ಕಳ ಕಲಿಕೆ ಹೇಗೆ ಸಾಧ್ಯ ಎಂದು ಪ್ರಶ್ನಿಸಿ ಈ ಸಂಬಂಧ ಇಂದೇ ಬಿ.ಇ.ಓ ಮತ್ತು ಡಿ.ಡಿ.ಪಿ.ಓ ಅವರೊಂದಿಗೆ ಚರ್ಚಿಸುವೆ ಎಂದರು. ನಂತರ ಗ್ರಾಮದಲ್ಲಿನ ಅಂಗನವಾಡಿ ಕೇಂದ್ರಕ್ಕೂ ಭೇಟಿ ನೀಡಿದ ಅವರು, ಅಲ್ಲಿ ಮಕ್ಕಳಿಗೆ ನೀಡಲಾಗುತ್ತಿರುವ ಪೌಷ್ಠಿಕ ಆಹಾರಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಮಕ್ಕಳ ಪಾಲಕರು 2 ವರ್ಷದಿಂದ ಅಂಗನವಾಡಿ ಕಾರ್ಯಕರ್ತೆ ಹುದ್ದೆ ಖಾಲಿ ಇದ್ದು, ಭರ್ತಿ ಮಾಡುವಂತೆ ಸದಸ್ಯರಲ್ಲಿ ಮನವಿ ಮಾಡಿಕೊಂಡರು. ಇದಕ್ಕೆ ಸದಸ್ಯರು ಸಂಬಂಧಪಟ್ಟ ಇಲಾಖೆಗೆ ಭರ್ತಿಗೆ ನಿರ್ದೇಶನ ನೀಡುವುದಾಗಿ ತಿಳಿಸಿದರು.

ನಂತರ ಸದಸ್ಯರು ಚಿತ್ತಾಪೂರ ತಾಲೂಕಿನ ಹಣ್ಣಿಕೇರಾ ಶಾಲೆಗೆ ಭೇಟಿ ನೀಡಿದರು. ಮಧ್ಯಾಹ್ನ ಹೊತ್ತಾಗಿದ್ದರಿಂದ ಶಾಲೆಯಲ್ಲಿ ಸುಮಾರು 290 ಮಕ್ಕಳು ಮಧ್ಯಾಹ್ನದ ಬಿಸಿಯೂಟ ಸೇವಿಸುತ್ತಿದ್ದರಿಂದ ಊಟದ ಗುಣಮಟ್ಟ ಪರಿಶೀಲಿದರು. ಊಟದ ನಂತರ ಮಕ್ಕಳು ನಲ್ಲಿ ನೀರು ಕುಡಿಯುತ್ತಿರುವುದನ್ನು ಗಮನಿಸಿದ ಸದಸ್ಯರು, ಶಾಲೆಗೆ ಶುದ್ದ ಕುಡಿಯುವ ನೀರು ಪೂರೈಸುವಂತೆ ಮತ್ತು ಶೌಚಾಲಯ ಸರಿಪಡಿಸುವಂತೆ ಗ್ರಾಮ ಪಂಚಾಯತ್ ಕಾರ್ಯದರ್ಶಿಗೆ ಸೂಚನೆ ನೀಡಿದರು. ವಸತಿ ಶಾಲೆ ಶಿಫ್ಟ್ ಮಾಡಲು ಸೂಚನೆ: ಇತ್ತೀಚೆಗೆ ಚಿತ್ತಾಪೂರ ತಾಲೂಕಿನ ಕಡಬೂರ ಗ್ರಾಮದ 16 ವರ್ಷದ ಬಾಲಕಿ ಭಾಗ್ಯಶ್ರೀ ಕರದಾಳ ಕಸ್ತೂರಬಾ ಗಾಂಧಿ ವಸತಿ ಶಾಲೆಯಲ್ಲಿಯೇ ಆತ್ಮಹತ್ಯೆ ಮಾಡಿಕೊಂಡಿದ್ದರಿಂದ ಕರದಾಳ ವಸತಿ ಶಾಲೆಗೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ಕೆ.ಟಿ. ಅವರು ಭೇಟಿ ನೀಡಿದರು. ಬಾಲಕಿ ಆತ್ಮಹತ್ಯೆಯ ಭಯದಿಂದ ಶಾಲೆಯನ್ನು ಪಕ್ಕದ ಶಾಲೆಯ ಕಟ್ಟಡಕ್ಕೆ ಸ್ಥಳಾಂತರಿಸಿದ್ದು, ಅಲ್ಲಿ ಮೂಲಸೌಕರ್ಯ ಇಲ್ಲದಿರುವುದನ್ನು ಕಂಡರು. ಮೂಲ ಶಾಲೆಯಲ್ಲಿ ಸಕಲ ಮೂಲಸೌಕರ್ಯ ಹೊಂದಿರುವುದರಿಂದ ಮಕ್ಕಳಿಗೆ ಧೈರ್ಯ ತುಂಬಿ, ಸದರಿ ಕಟ್ಟಡಕ್ಕೆ ಸ್ಥಳಾಂತರಿಸುವಂತೆ ಪ್ರಾಂಶುಪಾಲರಿಗೆ ನಿರ್ದೇಶನ ನೀಡಿದರು. ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಗಳಾ ಪಾಟೀಲ, ಕಾನೂನು ಪರಿವೀಕ್ಷಣಾಧಿಕಾರಿ ಭರತೇಶ ಶೀಲವಂತ ಇದ್ದರು.

# ರೋಟರಿ ಕ್ಲಬ್ ಪದಾಧಿಕಾರಿಗಳ ಆಯ್ಕೆ



ಬ್ಯಾಡಗಿ:–

ಪಟ್ಟಣದ ರೋಟರಿ ಕ್ಲಬ್ ಬ್ಯಾಡಗಿಯ ವಾರ್ಷಿಕ ಸರ್ವ ಸದಸ್ಯರ ಸಭೆಯಲ್ಲಿ 2024 25 ನೇ ಸಾಲಿಗೆ ಹೊಸ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆಯಿತು.

ಸಭೆಯಲ್ಲಿ ಅಧ್ಯಕ್ಷರಾಗಿ ಎಸ್ ಎಂ ಬೂದಿಹಾಳಮಠ, ಕಾರ್ಯದರ್ಶಿಯಾಗಿ ನಿರಂಜನ ಶೆಟ್ಟಿಹಳ್ಳಿ, ಖಜಾಂಚಿಯಾಗಿ ವೀರೇಶ ಬಾಗೋಜಿ, ಉಪಾಧ್ಯಕ್ಷರಾಗಿ ಕಿರಣ ವೆರ್ಣೇಕರ್, ಜಂಟಿ ಕಾರ್ಯದರ್ಶಿಯಾಗಿ ಚಂದ್ರಶೇಖರ ಗಾಣಿಗೇರ ಇವರು ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ ಎಂದು ಅಸಿಸ್ಟೆಂಟ್ ಗವರ್ನರ್ ಮಂಜುನಾಥ ಉಪ್ಪಾರ ಪ್ರಕಟಣೆಯಲ್ಲಿ ತಿಳಿಸಿದ್ದು, ನೂತನ ಪದಾಧಿಕಾರಿಗಳ ಒಂದು ವರ್ಷದ ಅಧಿಕಾರ ಅವಧಿ ಉತ್ತಮ ಸಮಾಜ ಪರ ಸೇವಾ ಕಾರ್ಯಗಳೊಂದಿಗೆ ಕೂಡಿರಲಿ ಎಂದು ಸರ್ವ ಸದಸ್ಯರೊಂದಿಗೆ ಶುಭ ಕೋರಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ರೋಟರಿ ಸಂಸ್ಥೆಯ ಮಾಜಿ ಅಧ್ಯಕ್ಷರುಗಳಾದ ಪರಶುರಾಮ ಮೇಲಗಿರಿ, ಮಾಲತೇಶ ಅರಳಿಮಟ್ಟಿ, ಬಸವರಾಜ ಸುಂಕಾಪುರ, ಡಾ.ಎ.ಎಂ.ಸೌದಾಗರ, ಶಿವರಾಜ ಚೂರಿ, ಸುರೇಶ ಗೌಡರ, ವಿಶ್ವನಾಥ ಅಂಕಲಕೋಟಿ, ಮಹಾಂತೇಶ ಮೇಲ್ಮುರಿ, ಜೆ.ಎಚ್.ಪಾಟೀಲ, ಮಾಲತೇಶ ಉಪ್ಪಾರ ಹಾಗೂ ಸದಸ್ಯರಾದ ಡಾ.ಎಸ್.ಎನ್.ನಿಡಗುಂದಿ, ಡಾ.ಪುಟ್ಟರಾಜ, ಡಾ.ನಾಗರಾಜ, ಡಾ. ಬಸವರಾಜ ಗೊಂದಿ, ಡಾ. ಸುರೇಶ ಗುಂಡಪಲ್ಲಿ, ಮಹಾಂತೇಶ ಬಂದಮ್ಮನವರ, ಪವಾಡಪ್ಪ ಆಚನೂರ, ಪ್ರಕಾಶ ಪಟ್ಟಣಶೆಟ್ಟಿ ಮಲ್ಲಿಕಾರ್ಜುನ ಕೆಂಬಿ, ಸತೀಶ ಅಗಡಿ, ರಾಘವೇಂದ್ರ ಮಳ್ಳಪ್ಪನವರ, ಮಹಾಂತೇಶ ಸುಂಕದ, ಮಾಲತೇಶ ಕಲ್ಯಾಣಿ, ಬಿ.ಎಸ್.ಪಾಟೀಲ, ಎಚ್.ಡಿ.ಶಾಂತಕುಮಾರ, ಮಹೇಶ್ವರಿ ಪಸಾರದ, ವಿಜಯ ವಾಲಿಶೆಟ್ಟರ, ಮಹೇಶ ಹಿರೇಮಠ ಇನ್ನಿತರರು ಉಪಸ್ಥಿತರಿದ್ದರು.

# ಶಾಲಾ ಕೊಠಡಿ ನಿರ್ಮಾಣಕ್ಕೆ ಭೂಮಿಪೂಜೆ



ಗುಳೇದಗುಡ್ಡ:–

ಗ್ರಾಮದಲ್ಲಿನ ವಿದ್ಯಾರ್ಥಿಗಳಿಗೆ ಉತ್ತಮ ಶೈಕ್ಷಣಿಕ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ತೆ–ೂೕಗುಣಶಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಸುಮಾರು 15.80 ಲಕ್ಷ ರೂ. ವೆಚ್ಚದಲ್ಲಿ ಶಾಲಾ ಕೊಠಡಿ ನಿರ್ಮಿಸಲಾಗುತ್ತಿದ್ದು, ಇದರಿಂದ ಶಾಲೆಯ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದು ಶಾಸಕ ಭೀಮಸೇನ ಚಿಮ್ಮನಕಟ್ಟಿ ಹೇಳಿದರು. ಅವರು ಸಮೀಪದ ತೋಗುಣಶಿ ಗ್ರಾಮದಲ್ಲಿ 2022–23ನೇ ಸಾಲಿನ ತಾಲೂಕು ಪಂಚಾಯಿತಿ ಅನಿರ್ಬಂದಿತ ಅನುದಾನದಡಿಯಲ್ಲಿ 15.80 ಲಕ್ಷರೂ. ವೆಚ್ಚದಲ್ಲಿ ನೂತನ ಶಾಲಾ ಕೊಠಡಿ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಕಟ್ಟಡದ ಕಾಮಗಾರಿಯು ಗುಣಮಟ್ಟದಿಂದ ಕೂಡಿರಬೇಕು ಹಾಗೂ ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ಇಲಾಖೆಗೆ ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ಅಮರೇಶ್ವರ ಮಠದ ಶ್ರೀ ನೀಲಕಂಠ ಸ್ವಾಮಿಗಳ ನೇತೃತ್ವದಲ್ಲಿ ಗ್ರಾಮಸ್ಥರು, ಗ್ರಾಮದಲ್ಲಿ ರಸ್ತೆ ನಿರ್ಮಿಸುವಂತೆ ಹಾಗೂ ಆಲಮಟ್ಟಿಯಿಂದ ಗ್ರಾಮಕ್ಕೆ ಬರುತ್ತಿದ್ದ ಕುಡಿಯುವ ನೀರು ಸರಬರಾಜು ನಿಂತಿ–ದ್ದು ಇದರಿಂದ ಗ್ರಾಮದಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಿದೆ, ಮೊದಲಿನಂತೆ ಗ್ರಾಮಕ್ಕೆ ಆಲಮಟ್ಟಿಯ ನೀರು ಸರಬರಾಜು ಪ್ರಾರಂಭಿಸಬೇಕು ಎಂದು ಮನವಿ ಮಾಡಿದರು. ಕುಡಿಯುವ ನೀರು ಪೂ–ರೈಕೆ ನಿಂತಿರುವ ಬಗ್ಗೆ ಸಂಬಂಧಿಸಿದ ಇಂಜನೀಯರಗಳೊಂದಿಗೆ ಚರ್ಚಿಸಿ, ಶೀಘ್ರದಲ್ಲಿ ಗ್ರಾಮಕ್ಕೆ ಆಲಮಟ್ಟಿ ನೀರಿನ ಸರಬರಾಜು ಮಾಡಲಾಗುವುದು ಇನ್ನು ಗ್ರಾಮದ ರಸ್ತೆ ನಿರ್ಮಾಣಕ್ಕೆ ಬೇಕಾದಷ್ಟು ಅನುದಾನ ಬಂದಿಲ್ಲ ಹೀಗಾಗಿ ರಸ್ತೆ ನಿರ್ಮಾಣಕ್ಕೆ ಒಂದಿಷ್ಟು ಸಮಯ ಬೇಕಾಗಿದೆ. ಆದರೆ ಖಂಡಿತವಾಗಿ ರಸ್ತೆ ನಿರ್ಮಾಣ ಮಾಡುತ್ತೇನೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಂಜಯ ಬರಗುಂಡಿ, ಶಿವಾನಂದ ವಾಲೀಕಾರ, ಗ್ರಾಪಂ ಸದಸ್ಯ ಮಲ್ಲಪ್ಪ ಜಾಲಿಹಾಳ, ಕಾಶೀನಾಥ ಪುರಾಣಿಕಮಠ, ಯಲ್ಲಪ್ಪ ಬಸರಕೋಡ, ಎಸ್.ಎಂ. ಪಾಟೀಲ, ಆರ್.ಕೆ. ಜಾನಮಟ್ಟಿ, ಗಂಗಪ್ಪ ಚಿಣ್ಣನ್ನವರ, ಎಂ.ಜಿ. ಭಗವತಿ, ಪಿಡಿಓ ಆರತಿ ಕ್ಷತ್ರಿ, ಕೆಆರ್‌ಐಡಿಎಲ್ ಇಂಜನೀಯರ ಬಸವರಾಜ ಚಿಟಗುಪ್ಪಿ, ಎನ್.ವೈ. ಪತ್ತಾರ, ಮೋತಿಲಾಲ ರಾಠೋಡ ಹಾಗೂ ಶಾಲೆಯ ಶಿಕ್ಷಕರು ಇದ್ದರು.

# ಶ್ರೀನಾರದಗಡ್ಡೆ ಮಠ; ಆಸ್ತಿ ನಿರ್ವಹಣೆ ಬಗ್ಗೆ ಸಾರ್ವಜನಿಕರಿಂದ ಅಭಿಪ್ರಾಯ

ರಾಯಚೂರು:–


ಕಲಬುರ್ಗಿ ಪೀಠ ಮಾನ್ಯ ಉಚ್ಚ ನ್ಯಾಯಾಲಯದ ನಿರ್ದೇಶನದಂತೆ ರಾಯಚೂರು ತಾಲ್ಲೂಕಿನ ಶ್ರೀನಾರದಗಡ್ಡೆ ಮಠಕ್ಕೆ ಸಂಬಂಧಿಸಿದ ಪ್ರಕರಣ ರಿಟ್ ಪಿಟಿಷನ್ ಸಂ–ಖ್ಯೆ:202655/2014 ಕ್ಕೆ ಸಂಬಂಧಿಸಿದಂತೆ ಈ ಮಠದ ಆಸ್ತಿ ನಿರ್ವಹಣೆಯ ಬಗ್ಗೆ ಸಾರ್ವಜನಿಕ ಅಭಿಪ್ರಾಯ ಪಡೆಯಲು ಇದೇ ಜೂನ್ 30ರಂದು ಶ್ರೀ ನಾರದಗಡೆ ಮಠದ ಆವರಣದಲ್ಲಿ ಪೂರಕ ದಾಖಲೆಗಳೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು, ಶ್ರೀ ನಾರದಗಡ್ಡೆ ಮಠದ ಪೀಠಾಧಿಪತಿಗಳು, ಸಾರ್ವಜನಿಕ ಮತ್ತು ಭಕ್ತಾಧಿಗಳು ಹಾಜರಾಗುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆದರ್ಶ ವಿದ್ಯಾಲಯ ಸರಕಾರಿ ಆಂಗ್ಲ ಮಾಧ್ಯಮ ಶಾಲೆ ಅರ್ಜಿಗೆ ದಿನಾಂಕ ವಿಸ್ತರಣೆ

ಮಾನ್ವಿ:–

ಮಾನ್ವಿ ತಾಲೂಕಿನ ನೀರಮಾನ್ವಿ ಗ್ರಾಮದಲ್ಲಿರುವ ಆದರ್ಶ ವಿದ್ಯಾಲಯ ಸರಕಾರಿ ಆಂಗ್ಲ ಮಾಧ್ಯಮ ಶಾಲೆ ನೀರಮಾನ್ವಿಯಲ್ಲಿ, 2024–25ನೇ ಸಾಲಿನ ಏಳನೇ ಎಂಟನೇ ಮತ್ತು 9ನೇ ತರಗತಿಯ ಉಳಿಕೆ ಸೀಟುಗಳ ದಾಖಲಾತಿಗಾಗಿ ಪ್ರವೇಶ ಪರೀಕ್ಷೆ ಅರ್ಜಿಗಳನ್ನು ಸ್ವೀಕರಿಸುವ ದಿನಾಂಕವನ್ನು ಜುಲೈ ಒಂದರವರೆಗೆ ವಿಸ್ತರಿಸಲಾಗಿದೆ. ಜುಲೈ ಆರರಂದು ಪ್ರವೇಶ ಪರೀಕ್ಷೆ ನಡೆಸಲಾಗುವುದು ,ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಜೀವನ್ ಸಾಬ್ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮುಖ್ಯೋಪಾಧ್ಯಾಯರನ್ನು (9945542681) ಸಂಪರ್ಕಿಸಲು ತಿಳಿಸಲಾಗಿದೆ

# ಜು. 11 ರಿಂದ 21 ರವರೆಗೆತಾಳಿಕೋಟೆಯ ಶ್ರೀ ಖಾಸ್ಗತೇಶ್ವರ ಜಾತ್ರಾ ಮಹೋತ್ಸವ



ತಾಳಿಕೋಟೆ:–

ಸ್ಥಳೀಯ ಶ್ರೀ ಖಾಸ್ಗತೇಶ್ವರ ಮಹಾ ಶಿವಯೋಗಿಗಳ ಜಾತ್ರಾ ಮಹೋತ್ಸವವು ಪ್ರತೀ ವರ್ಷದಂತೆ ಈ ಸಲ ಜೂಲೈ 11 ರಿಂದ 21 ರವಿವಾರದವರೆಗೆ ವಿಜೃಂಭಣೆಯಿಂದ ಜರುಗಲಿದೆ. ಶ್ರೀ ಖಾಸ್ಗತೇಶ್ವರ ಮಠದ ಬಾಲಶಿವಯೋಗಿ ಶ್ರೀ ಸಿದ್ದಲಿಂಗ ಮಹಾ ಸ್ವಾಮಿಗಳವರ ಘನ ಅಧ್ಯಕ್ಷತೆಯಲ್ಲಿ ಜರುಗಲಿರುವ ಈ ಜಾತ್ರಾ ಮಹೋತ್ಸವದಲ್ಲಿ ಪ್ರತೀ ದಿನ ಬೆಳಿಗ್ಗೆ 6 ಘಂಟೆಗೆ ಶ್ರೀ ಖಾಸ್ಗತೇಶ್ವರ ಕತ ಗದ್ದುಗೆಗೆ ಮಹಾರುದ್ರಾಭಿಷೇಕ, ಬಿಲ್ವಾರ್ಚನೆ, ಪುಷ್ಪಾರ್ಚನೆ, ಮಹಾ ಮಂಗಳಾರತಿ ಕಾರ್ಯಕ್ರಮವನ್ನು ವೇ॥ ವಿಶ್ವನಾಥ ವಿರಕ್ತಮಠ ಅವರು ನೆರವೇರಿಸುವರು. ಒಂಬತ್ತು ದಿನಗಳ ಕಾಲ ಜರುಗಲಿರುವ ಶ್ರೀ ನಿಜಗುಣ ಶಿವಯೋಗಿಗಳ ಶಾಸ್ತ್ರ ಪ್ರವಚನವು ಬೆಳಿಗ್ಗೆ 8–30 ರಿಂದ 9–30 ರವರೆಗೆ ಸಾಯಂಕಾಲ 6 ರಿಂದ 7 ಘಂಟೆಯವರೆಗೆ ಜರುಗುವದು. ಶಾಸ್ತ್ರ ಪ್ರವಚನವನ್ನು ಕೋರವಾರ ಚೌಕಿಮಠದ ಶ್ರೀ ಮುರುಘೇಂದ್ರ ಮಹಾಸ್ವಾಮಿಗಳು, ಗಡಿ ಸೋಮನಾಳದ ಇಂದುಧರ ಮಹಾಸ್ವಾಮಿಗಳು, ಶಿವಶರಣೆಯರಾದ ಶಾಂತಮ್ಮ ಕೋಳೂರ, ದಾನಮ್ಮ ಮಠ, ಇಂದುಮತಿ ಬಬಲೇಶ್ವರ, ಹಾಗೂ ಎಸ್.ಎಸ್.ಬೇನಾಳಮಠ(ಬೇಕಿನಾಳ), ಆನಂದಾಶ್ರಮ ಶಾಸ್ತ್ರ ಸಮಿತಿ ಬಳಗದವರು ನಡೆಸಿಕೊಡುವರು. ಜೂಲೈ 11 ಗುರುವಾರರಂದು ಪ್ರಾರಂಭಗೊಳ್ಳಲಿರುವ ಸಪ್ತ ಭಜನಾ ಕಾರ್ಯಕ್ರಮವು ಜೂಲೈ 18 ಗುರುವಾರರಂದು ಮಂಗಲಗೊಳ್ಳುವದು. ಈ ಭಜನಾ ಕಾರ್ಯಕ್ರಮದಲ್ಲಿ ತಾಳಿಕೋಟೆ, ಗೊಟಗುಣಕಿ, ಮೈಲೇಶ್ವರ, ಬಿಳೇಭಾವಿ, ಹಗರಟಗಿ, ಬ.ಸಾಲವಾಡಗಿ, ಕೋ.ಬೂದಿಹಾಳ, ವಂದಗನೂರ, ಬೋಳವಾಡ, ಬೊಮ್ಮನಹಳ್ಳಿ, ಕಾ.ಬೂದಿಹಾಳ, ಅಸ್ಕಿ, ಬನ್ನೆಟ್ಟಿ, ಹೊಸಳ್ಳಿ, ಗುಂಡಲಗೇರಿ, ತುಂಬಗಿ, ಪತ್ತೇಪೂರ, ಗಡಿಸೋಮನಾಳ, ಕ್ಯಾತನಾಳ, ಹೂವಿನಹಳ್ಳಿ, ಮಿಣಜಗಿ, ಮೂಕಿಹಾಳ, ಕಲ್ಲದೇವನಹಳ್ಳಿ, ಹಡಗಿನಾಳ, ಹರನಾಳ, ಗುತ್ತಿಹಾಳ, ಶಿವಪೂರ, ಬಾವೂರ, ಬಳವಾಟ, ಲಿಂಗದಳ್ಳಿ, ಬೇನಾಳ, ಇಂಗಳಗೇರಿ, ತಾರನಾಳ, ಪಡೇಕನೂರ, ಬ್ಯಾಕೋಡ, ಸಾಲವಾಡಗಿ, ಜಮ್ಮಲದಿನ್ನಿ, ಕೂಚಬಾಳ, ಬಳಗಾನೂರ, ಕೊಡಗಾನೂರ, ಬ್ಯಾಲ್ಯಾಳ, ತಮದಡ್ಡಿ, ಚಿಕ್ಕನಹಳ್ಳಿ, ಆಲ್ಯಾಳ, ಕೊಣ್ಣೂರ, ಶರಣಸೋಮನಾಳ, ಸಿಂದಗೇರಿ, ಚೊಕಾವಿ, ನೀರಲಗಿ, ನಾವದಗಿ, ಗುಂಡಕನಾಳ, ತಳ್ಳಳ್ಳಿ, ಜಲಪೂರ, ಶಳ್ಳಗಿ, ಮಡಿಕೇಶ್ವರ, ಲಕ್ಕುಂಡಿ, ವಸಂತಾಪೂರ, ವಡವಡಗಿ, ಬಿಂಜಲಬಾವಿ, ಪೀರಾಪೂರ, ಹೂವಿನಹಳ್ಳಿ, ಭಂಟನೂರ, ಅಮಲ್ಯಾಳ, ಚಿಂಚೋಳಿ, ಕಾರಗನೂರ, ನಾಗರಾಳಹುಲಿ, ಎಂ.ಬೊಮ್ಮನಹಳ್ಳಿ, ಬಂಗಾರಗುಂಡ ಮೊದಲಾದ ಗ್ರಾಮಗಳನ್ನೊಳಗೊಂಡು ಸುಮಾರು 150 ಕ್ಕೂ ಮೇಲ್ಪಟ್ಟು ಭಜನಾ ಮಂಡಳಿಯವರು ಪಾಲ್ಗೊಂಡು ಶಿವ ಭಜನೆ ಸೇವೆ ಸಲ್ಲಿಸುವರು. ದಿ. 17 ಬುಧವಾರರಂದು ಸಾಯಂಕಾಲ 5 ಘಂಟೆಯಿಂದ ಶ್ರೀ ಖಾಸ್ಗತೇಶ್ವರ ಮಹಾ ಶಿವಯೋಗಿಗಳವರ ಧ್ವಜದ ಮೆರವಣಿಗೆಯು ಶ್ರೀ ಬಸವೇಶ್ವರ ದೇವಸ್ಥಾನದಿಂದ ಪ್ರಾರಂಭಗೊಂಡು ಸಕಲ ವಾಧ್ಯ ವೈಭವಗಳೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಹಾಯ್ದು ಶ್ರೀ ಮಠಕ್ಕೆ ತಲುಪಿ ಅಲ್ಲಿ ಧ್ವಜದ ಪ್ರತಿಷ್ಠಾಪನಾ ಕಾರ್ಯಕ್ರಮ ನೆರವೇರುವುದು. ದಿ. 18 ಗುರುವಾರರಂದು ಬೆಳಿಗ್ಗೆ 4 ಘಂ–ಟೆಗೆ ಪ್ರಾರಂಭಗೊಳ್ಳಲಿರುವ ಪ್ರಭಾತಪೇರಿಯೊಂದಿಗೆ ಮೊಸರು ಗಡಿಗೆ(ಗೋಪಾಲ ಕಾವಲಿ) ಒಡೆಯುವ ಕಾರ್ಯಕ್ರಮವು ನಸುಕಿನ ಜಾವ 5–30 ಘಂಟೆಗೆ ಜರುಗುವುದು. ಅಂದೇ ಸಪ್ತ ಭಜನಾ ಕಾರ್ಯಕ್ರಮ ಮಂಗಲಗೊಳ್ಳುವುದಲ್ಲದೇ ಮದ್ಯಾಹ್ನ 12 ಘಂಟೆಗೆ ಮಹಾಪ್ರಸಾದ ವಿತರಣೆ ನಡೆಯುವುದು. ರಾತ್ರಿ ಶ್ರೀ ಮಠದಲ್ಲಿ ಸಂಗೀತ ಕಾರ್ಯಕ್ರಮ ಜರುಗುವದು. ದಿ. 19 ಶುಕ್ರವಾರರಂದು ಮುಂಜಾನೆ 8 ಘಂಟೆಯಿಂದ ಶ್ರೀ ಖಾಸ್ಗತ ಶ್ರೀಗಳ ಬೆಳ್ಳಿ ಮೂರ್ತಿ ಆನೆ ಅಂಭಾರಿ ಮೇಲೆ ಕೂಡ್ರಿಸಿಕೊಂಡು ಆಶ್ವಾರೂಡ ರಥದಲ್ಲಿ ಶ್ರೀ ಸಿದ್ದಲಿಂಗ ಮಹಾ ಸ್ವಾಮಿಗಳನ್ನು ಕೂಡ್ರಿಸಿ ಶ್ರೀ ಮಠದಿಂದ ವಿವಿಧ ವಾಧ್ಯ ವೈಭವಗಳೊಂದಿಗೆ ಭವ್ಯ ಮೆರವಣಿಗೆಯು ರಾಜವಾಡೆಯ ಭೀಮನಭಾವಿಯಲ್ಲಿ ಗಂಗಸ್ಥಳಕ್ಕೆ ತೆರಳಿ ಗಂಗಸ್ಥಳ ಮುಗಿಸಿಕೊಂಡು ಪ್ರಮುಖ ಬೀದಿಗಳಲ್ಲಿ ಆನೆ ಅಂಬಾರಿ ಉತ್ಸವದೊಂದಿಗೆ ಶ್ರೀಗಳ ಮಠಕ್ಕೆ ತಲುಪುವದು. ಅಂದೇ ಸಾಯಂಕಾಲ 5 ಘಂಟೆಗೆ ಶ್ರೀ ಖಾಸ್ಗತ ಮಹಾಶಿವಯೋಗಿಗಳವರ ಮಹಾರಥೋತ್ಸವ ಅಸಂಖ್ಯಾತ ಭಕ್ತ ಸಮೂಹದ ಮದ್ಯ ಜರುಗುವದು. ನಂತರ ಶ್ರೀ ಮಠದ ಸಿದ್ದಲಿಂಗ ಮಹಾಸ್ವಾಮಿಗಳಿಂದ ಆಶಿರ್ವಚನ, ಆಶಿರ್ವಾದ ದಯಪಾಲಿಸುವರು. ಜೂಲೈ 21 ರವಿವಾರರಂದು ಹುಣ್ಣಿಮೆಯ ದಿನ ಸಾಯಂಕಾಲ 5 ಘಂಟೆಗೆ ಶ್ರೀ ಖಾಸ್ಗತ ಶಿವಯೋಗಿಗಳವರ ರಥದ ಕಳಸ ಇಳಿಸುವ ಕಾರ್ಯಕ್ರಮದೊಂದಿಗೆ ಜಾತ್ರಾ ಮಹೋತ್ಸವವು ಮಂಗಲಗೊಳ್ಳಲಿದೆ. ಕಾರಣ ಪಟ್ಟಣ ಹಾಗೂ ನಗರ, ಸುತ್ತಮುತ್ತಲಿನ ಗ್ರಾಮಗಳ ಜನತೆ ಜಾತ್ರೋತ್ಸವದಲ್ಲಿ ಪಾಲ್ಗೊಂಡು ಶ್ರೀ ಖಾಸ್ಗತೇಶ್ವರ ಮಹಾ ಸ್ವಾಮಿಗಳ ಕೃಪೆಗೆ ಪಾತ್ರರಾಗಬೇಕೆಂದು ಶ್ರೀಮಠದ ಉಸ್ತುವಾರಿ ವೇ॥ ಮುರುಘೇಶ ವಿರಕ್ತಮಠ ಅವರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿನಿಯರು ತಮ್ಮ ಮೇಲೆ ನಡೆಯುವ ದೌರ್ಜನ್ಯಗಳ ವಿರುದ್ಧ ಪ್ರಶ್ನಿಸುವ ಮನೋಭಾವ ರೂಡಿಸಿಕೊಳ್ಳಬೇಕು: ಡಾ.ನಾಗಲಕ್ಷ್ಮೀ ಚೌಧರಿ




ಕಲಬುರಗಿ:–

ವಿದ್ಯಾರ್ಥಿನಿಯರು ತಮ್ಮ ಮೇಲೆ ನಡೆಯುವ ದೌರ್ಜನ್ಯಗಳ ವಿರುದ್ಧ ಪ್ರಶ್ನಿಸುವ ಮನೋಭಾವವನ್ನು ರೂಡಿಸಿಕೊಳ್ಳಬೇಕು ಎಂದು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮ ನಡೆಸಿದರು.

ಗುರುವಾರ ಇಲ್ಲಿನ ಸರಕಾರಿ ಮಹಾ ವಿದ್ಯಾಲಯ(ಸ್ವಾಯತ್ತ) ಕಲಬುರಗಿ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಆಯೋಗ ಬೆಂಗಳೂರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಬಾಬಾ ಸಾಹೇಬ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮಕ್ಕಳಲ್ಲಿ ಎಲ್ಲ ವಿಷಯಗಳ ಬಗ್ಗೆ ಕಲಿಕೆ ಮಾಡಿಸುತ್ತೀರಾ ಆದರೆ ಹೆಣ್ಣು ಮಕ್ಕಳಿಗೆ ಕಾನೂನು ಅರಿವು ಕಾರ್ಯಕ್ರಮ ಕೂಡಾ ಅಷ್ಟೇ ಮುಖ್ಯವಾಗಿದೆ ಎಂದರು.

7 ನೇ ತರಗತಿಯಿಂದ ಹೆಣ್ಣು ಮಕ್ಕಳಲ್ಲಿ ಹಾರ್ಮೋನಲ್ ಬದಲಾವಣೆಗಳು ಆಗುವುದು ಸಹಜ ಅವರಿಗೆ ಯಾರು ಹೇಗೆ ವರ್ತನೆ ಮಾಡುತ್ತಿರುವುದು ತಿಳಿದುಕೋಳ್ಳುವ ಸಾಮರ್ಥ್ಯ ಇರುತ್ತದೆ ಹಾಗಾಗಿ ಸಹಾಯವಾಣಿ ಸಂಖ್ಯೆಗಳ ಬಗ್ಗೆ ಮತ್ತು ಜನಸೇಹಿ ಹಾಗೂ ಮಿಷನ್ ಸುರಕ್ಷಾಗಳ ಬಗ್ಗೆ ಸವಿಸ್ತಾರವಾಗಿ ಹೇಳಿಕೊಂಡುವುದರಲ್ಲಿ ಏನು ತಪ್ಪಿಲ್ಲ ಎಂದರು. ವಿದ್ಯಾರ್ಥಿ ಪ್ರಶ್ನೆಯೊಂದಿಗೆ ಮಾತನಾ ಡಿದ ಅವರು ಮಹಿಳಾ ಮೀಸಲಾತಿ ಬಗ್ಗೆ ವಿದ್ಯಾರ್ಥಿನಿಯರೊಂದಿಗೆ ಆಳ ವಾದ ಸಂವಾದ ನಡೆಸಿದ ಅವರು ಮಹಿಳೆಯರು ಹೇಗೆ ಸಬಲೀಕರಣ ಆಗಲು ಬಾಬಾ ಸಾಹೇಬ್ ಅವರು ಹೇಳಿದ ಮಾತು ಶಿಕ್ಷಣ, ಸಂಘಟನೆ ಹಾಗೂ ಹೋರಾಟದ ಬಗ್ಗೆ ಬಹಳ ಗಾಢವಾಗಿ ತಿಳಿ ಹೇಳಿದರು.

ಜಿನಲ್ಲಿ ವಾರಗಟ್ಟಲೇ ನೀರಿನ ಪೂರೈಕೆ ಇರಲಿಲ್ಲ. ಗರ್ಭಿಣಿಯರು ಬಾಣಂತಿಯರು ಅಷ್ಟು ದಿನ ಸ್ನಾನ ಇಲ್ಲದೇ ಹೇಗೆ ಕಳೆಯಬೇಕು? ಇಂತಹ ಪರಿಸ್ಥಿತಿ ಬರದಂತೆ ನೋಡಿಕೊಳ್ಳಬೇಕು. ನಿಮ್ಮ ಮನೆಯ ಹತ್ತಿರ ಕಸ ಬಿದ್ದಿದ್ದರೆ ಕೂಡಲೇ ಕಾರ್ಪೋರೇಶನ್‌ವರಿಗೆ ಕರೆ ಮಾಡಬೇಕು. ಪೊಲೀಸ್ ಠಾಣೆಗೆ ದೂರು ನೀಡಲು ಹೋದಾಗ ಸಿಬ್ಬಂದಿ ನಿಮ್ಮೊಂದಿಗ ಸೌಜನ್ಯದೊಂದಿಗೆ ವರ್ತಿಸಿ ನಿಮ್ಮ ದೂರು ಸ್ವೀಕರಿಸಬೇಕು.

ಠಾಣೆಯಲ್ಲಿ ಸೂಕ್ತ ಸ್ಪಂದನೆ ದೊರೆಯದಿದ್ದರೆ ಪೊಲೀಸ್ ಠಾಣೆಯ ಹೊರಗೆ ಅಂಟಿಸಿರುವ ಕ್ಯೂಆರ್‌ಕೋಡ್ ಸ್ಕ್ಯಾನ್ ಮಾಡಿ ಅಲ್ಲಿ ನಿಮ್ಮ ಅನುಭವ ಹಂಚಿಕೊಳ್ಳಬೇಕು ಎಂದರು.

ನಂತರ ನಡೆದ ಸಂವಾದದಲ್ಲಿ ಪ್ರತಿಕ್ರಿಯೆ ನೀಡಿದ ಅಧ್ಯ–ಕ್ಷೆ ನಾಗಲಕ್ಷ್ಮೀ ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ರಾಜಕಾರಣಕ್ಕೆ ಬರಬೇಕು. ಚುನಾವಣೆಯಲ್ಲಿ ಆಯ್ಕೆಯಾಗಿ ಉತ್ತಮ ಆಡಳಿತ ನೀಡಿದರು ಜನರು ನಿಮ್ಮ ಹಿಂದೆ ಇರುತ್ತಾರೆ. ನೀವೊಂದು ಪ್ರಬಲ ಶಕ್ತಿಯಾಗಿ ಕಾಣಿಸಿಕೊಂಡಾಗ ಯಾವುದೇ ಸರ್ಕಾರವಿದ್ದರೂ ನಿಮ್ಮ ಬೇಡಿಕೆಗಳನ್ನು ಈಡೇರಿಸುತ್ತದೆ ಹಾಗಾಗಿ ರಾಜಕಾರಣದಲ್ಲಿ ಸಕ್ರೀಯವಾಗಿ ತೊಡಗಿಸಿಕೊಳ್ಳಿ ಎಂದರು.

. ಪದವಿ ಕಾಲೇಜಿನ್ ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಮಹಿಳಾ ಆಯೋಗ ಅಧ್ಯಕ್ಷೆ ಅವರು ಸಂವಾದ ನಡೆಸಿದರು.

ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಡಾ.ಸವಿತಾ ತಿವಾರಿ ಅಧ್ಯಕ್ಷತೆ ವಹಿಸಿದರು.

ಸಂವಾದ ಕಾರ್ಯಕ್ರಮದಲ್ಲಿ ಕೆ.ಕೆ.ಆರ್. ಟಿ.ಸಿ. ವಿಭಾಗೀಯ ನಿಯಂತ್ರಣಾಧಿಕಾರಿ. ಲಕ್ಷ್ಮೀನಾರಾಯಪ್ಪ ಕುರಬರ್ , ಮಹಿಳಾ ಮತ್ತು ಕಲ್ಯಾಣ ಇಲಾಖೆಯ ಉಪನಿರ್ದೇಶಕ ನವೀನ ಯು., ಲಾ ವಿಭಾಗ ಡೀನರಾದ ಡಾ. ವಿಜಯಕುಮಾರು ಸಾಲಿಮನಿ, ವಾಣಿಜ್ಯ ವಿಭಾಗ ಡೀನರಾದ ಡಾ.ರಾಜಕುಮಾರು ಸಲಗರ, ಸಾಂಸ್ಕೃತಿ ಕಾರ್ಯದರ್ಶಿ ಡಾ. ಬಲಭೀಮ ಸಾಂಗ್ಲೀ, ವಿದ್ಯಾರ್ಥಿ ಕಲ್ಯಾಣಾಧಿಕಾರಿ ಡ. ಸುರೇಶ ಮಾಳೆಗಾಂವ, ಲಕ್ಷ್ಮೀಕಾಂತ ಹೂಗಾರ ಅವರು ಪ್ರಾರ್ಥನ ಗೀತೆಯನ್ನು ಹಾಡಿದರು. ಶಾಮಲ್ಲಾ ಸ್ವಾಗತಿಸಿದರು. ವಿಧ್ಯಾರ್ಥಿ ಕಲ್ಯಾಣಾಧಿಕಾರಿಗಳಾದ ಡಾ. ಸುರೇಶ ಮಾಳೆಗಾಂವ ನಿರೂಪಿಸಿದರು. ಇರಮ್ಮ ಪಾಟೀಲ್ ವಂದರ್ನಾಪಣೆಯನ್ನು ಮಾಡಿದರು.

Editor:S.K.Wadeyar,#378/379, "MAYAGAPPA COMPLEX" 1st Stage 6th Phase Industrial Town west of chord Road Rajajinagar Bengaluru-560044.Karnataka.
Publisher:S.K.Wadeyar,#378/379, "MAYAGAPPA COMPLEX" 1st Stage 6th Phase Industrial Town west of chord Road Rajajinagar Bengaluru-560044.Karnataka.
Printer:SUCHITHRA PRINTER's & PUBLISHER's,#378/379, "MAYAGAPPA COMPLEX" 1se Stage 6th Phase Industrial Town west of chord Road Rajajinagar Bengaluru-560044.Karnataka.
Owner:S.K.Wadeyar,#378/379, "MAYAGAPPA COMPLEX" 1se Stage 6th Phase Industrial Town west of chord Road Rajajinagar Bengaluru-560044.Karnataka.